ಸಂಪುಟ : 11 ಸಂಚಿಕೆ : 139 ಪುಟ : 4+2 ಬೆಲೆ : 3.00 ಶನಿವಾರ ಜುಲೈ 4, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 139 Pages : 4+2 Rate : 3.00 Saturday July 4, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22




## ಬೆಳೆ ಸಮೀಕ್ಷೆ ಕಡ್ಡಾಯ; ನಿರ್ಲಕ್ಷಿಸಿದರೆ ಸೌಲಭ್ಯ ತಪ್ಪುವ ಸಾಧ್ಯತೆ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಆರಂಭಗೊಂಡಿದ್ದು, ರೈತರು ತಾವು ಬೆಳೆದಿರುವ ಬೆಳೆಗಳ ವಿವರಗಳನ್ನು "ಮುಂಗಾರು ರೈತರ ಬೆಳೆ ಸಮೀಕ್ಷೆ–2026" ಮೊಬೈಲ್ ಆ್ಯಪ್ ಮೂಲಕ ಕಡ್ಡಾಯವಾಗಿ ದಾಖಲಿಸುವಂತೆ ಕೃಷಿ ಇಲಾಖೆ ಮನವಿ ಮಾಡಿದೆ.

ರೈತರು ಗೂಗಲ್ ಪ್ಲೇ ಸ್ಟೋರ್‌ನಿಂದ ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ಸ್ವತಃ ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡಬೇಕು. ಬೆಳೆ ಸಮೀಕ್ಷೆಯಲ್ಲಿ ಮಾಹಿತಿ ದಾಖಲಿಸುವುದರಿಂದ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಯೋಜನೆ, ಬೆಳೆ ವಿಮೆ, ಬರ ಹಾಗೂ ಪ್ರವಾಹ ಸಂದರ್ಭದ ನಷ್ಟ ಪರಿಹಾರ, ಪಹಣಿಯಲ್ಲಿ ಬೆಳೆ ವಿವರ ದಾಖಲಿಕೆ ಹಾಗೂ ಬೆಳೆಸಾಲ ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆಯಲು ಅನುಕೂಲವಾಗಲಿದೆ.

ಬೆಳೆ ವಿವರಗಳನ್ನು ದಾಖಲಿಸದ ರೈತರು ಸರ್ಕಾರದ ವಿವಿಧ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ಎಲ್ಲ ರೈತರು ಈ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ತ್ವರಿತವಾಗಿ ಬೆಳೆ ಸಮೀಕ್ಷೆ ಪೂರ್ಣಗೊಳಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 1800 425 3553 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಬಹುದು. ಅಲ್ಲದೆ ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ, ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಗದಗ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೇ ಸ್ಥಗಿತಗೊಂಡಿರುವ ಗದಗ ತಾಲೂಕಿನ ಓಂಕಾರೇಶ್ವರ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಗದಗ ಅನ್ನು ಸಮಾಪನೆಗೊಳಿಸುವ ಪ್ರಕ್ರಿಯೆ ಆರಂಭಿಸಲಾಗಿದ್ದು, ಸಂಬಂಧಪಟ್ಟವರು ಏಳು ದಿನದೊಳಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ.

ಸಹಕಾರ ಸಂಘವು ತನ್ನ ನೋಂದಾಯಿತ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಸಂಘದ ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ ಕುರಿತು ಮಾಹಿತಿ ಲಭ್ಯವಿಲ್ಲದ ಹಿನ್ನೆಲೆಯಲ್ಲಿ ಮಾನ್ಯ ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿ ಸಮಾಪನಾಧಿಕಾರಿಯನ್ನು ನೇಮಿಸಿದ್ದಾರೆ.

ಸಂಘಕ್ಕೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿಗಳಿಗೆ ಅಥವಾ ವ್ಯಕ್ತಿಗಳಿಂದ ಕೊಡತಕ್ಕ ಅಥವಾ ಬರತಕ್ಕ ಬಾಕಿ ವ್ಯವಹಾರಗಳಿದ್ದರೆ, ಅಗತ್ಯ ದಾಖಲಾತಿಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನದಿಂದ ಏಳು ದಿನಗಳೊಳಗೆ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯಲ್ಲಿರುವ ಸಹಕಾರ ಸಂಘಗಳ ನಿರೀಕ್ಷಕರನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬೇಕು.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಸಂಘದ ಅಧಾವೆಯನ್ನು ನಿಯಮಾನುಸಾರ ಶೂನ್ಯಗೊಳಿಸಿ ನೋಂದಣಿ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು. ಬಳಿಕ ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ಶ್ರೀಮತಿ ಎನ್.ಆರ್. ಜಕಾತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು. 8ರಂದು ನರಗುಂದದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಲೋಕಾಯುಕ್ತ ವತಿಯಿಂದ ಜುಲೈ 8ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನರಗುಂದ ಪುರಸಭೆ ಸಭಾಭವನದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಹಾಗೂ ಸಾರ್ವಜನಿಕರಿಂದ ದೂರು–ಅಹವಾಲು ಸ್ವೀಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಗದಗ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಈ ಸಭೆಯನ್ನು ಆಯೋಜಿಸಿದ್ದು, ಸಾರ್ವಜನಿಕರು ತಮ್ಮ ಸಮಸ್ಯೆಗಳು, ದೂರುಗಳು ಹಾಗೂ ಅಹವಾಲುಗಳನ್ನು ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಗದಗ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯಬಾರದು; ವಿಶೇಷ ಸಮಗ್ರ ಪರಿಷ್ಕರಣೆಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಚಾಲನೆ

# ಮತದಾರರ ಪಟ್ಟಿಗೆ ಮಹಾಜಾಗೃತಿ ಜಾಥಾ

**ವಿಜಯಸಾಕ್ಷಿ ಸುದ್ದಿ, ಗದಗ**

ಅರ್ಹ ಮತದಾರರು ಯಾರೂ ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ನಿಖರ ಮತ್ತು ದೋಷರಹಿತ ಮತದಾರರ ಪಟ್ಟಿಯೇ ಬಲಿಷ್ಠ ಪ್ರಜಾಪ್ರಭುತ್ವದ ಅಡಿಪಾಯ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಹಾಗೂ ತಾಲೂಕು ಸ್ವೀಪ್ ಸಮಿತಿಗಳ ಸಹಯೋಗದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ2026 ಅಂಗವಾಗಿ ಶುಕ್ರವಾರ ನಗರದ ಮುನ್ಸಿಪಲ್ ಹೈಸ್ಕೂಲ್ ಆವರಣದಲ್ಲಿ ಆಯೋಜಿಸಿದ್ದ ಜನಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿ ಇಪ್ಪತ್ತು ವರ್ಷಗಳಿಗೊಮ್ಮೆ ಮತದಾರರ ಪಟ್ಟಿಯನ್ನು ಸಮಗ್ರವಾಗಿ ಪರಿಷ್ಕರಿಸುವ ಪ್ರಕ್ರಿಯೆ ನಡೆಯುತ್ತದೆ. ಈ ಬಾರಿ 2026ರ ವಿಶೇಷ ಪರಿಷ್ಕರಣೆಯಡಿ ಈಗಿರುವ ಮತದಾರರ ಮಾಹಿತಿಯನ್ನು ದೃಢೀಕರಿಸುವ ಜೊತೆಗೆ ಹೊಸ ಅರ್ಹ ಮತದಾರರನ್ನು ಸೇರ್ಪಡೆಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು



ತಿಳಿಸಿದರು.

ಜೂನ್ 30ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಸಾರ್ವಜನಿಕರು ಅಗತ್ಯ ದಾಖಲೆಗಳು ಹಾಗೂ ಮಾಹಿತಿಯನ್ನು ನೀಡಿ ಸಹಕರಿಸಬೇಕು. ಯುವಜನರು ತಮ್ಮ ಕುಟುಂಬದ ಸದಸ್ಯರು ಹಾಗೂ ಪರಿಚಿತರ ಹೆಸರು ಮತದಾರರ ಪಟ್ಟಿಯಲ್ಲಿದೆಯೇ ಎಂಬುದನ್ನು ಪರಿಶೀಲಿಸಿ, ಅಗತ್ಯ ನಮೂನೆಗಳನ್ನು ಭರ್ತಿ ಮಾಡಿ ಪ್ರಕ್ರಿಯೆ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಹಾಗೂ ಜಿಲ್ಲಾ ನೋಡಲ್ ಅಧಿಕಾರಿ ಎ.ಎ. ಕಂಬಾಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಚುನಾವಣೆಗಳ ಯಶಸ್ಸಿಗೆ ನಿಖರ ಮತದಾರರ ಪಟ್ಟಿಯೇ ಮೂಲಾಧಾರವಾಗಿದೆ. ಈ ಬಾರಿ ಸಮಗ್ರ ಪರಿಶೀಲನೆಯ ಮೂಲಕ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮುನ್ಸಿಪಲ್ ಹೈಸ್ಕೂಲ್‌ನಿಂದ ಆರಂಭವಾದ ಜಾಗೃತಿ ಜಾಥಾ ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಟಾಂಗಾ ಕೂಟ, ಬಸವೇಶ್ವರ ಸರ್ಕಲ್, ಜೋಡು ಮಾರುತಿ ರಸ್ತೆ ಮೂಲಕ ಮುಳಗುಂದ ನಾಕಾದವರೆಗೆ ಸಂಚರಿಸಿತು. ಎನ್‌ಸಿಸಿ, ಸ್ಕೌಟ್ಸ್–ಗೈಡ್ಸ್, ಶಾಲಾ–ಕಾಲೇಜು ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಮತದಾರರ ಜಾಗೃತಿ ಘೋಷಣೆಗಳನ್ನು ಕೂಗಿ ಗಮನ ಸೆಳೆದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಡಿಡಿಪಿಐ ಆರ್.ಎಸ್. ಬುರಡಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

> "ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಸಾರ್ವಜನಿಕರ ಸಹಕಾರದಿಂದ ಮಾತ್ರ ದೋಷರಹಿತ ಹಾಗೂ ನಿಖರ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಸಾಧ್ಯ."
>
> **–ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು**

### ಆಶ್ರಮದ ಪಾವಿತ್ರ್ಯಕ್ಕೆ ಧಕ್ಕೆ ಬಂದರೆ ಸುಮ್ಮನಿರುವುದಿಲ್ಲ

## ವೀರೇಶ್ವರ ಪುಣ್ಯಾಶ್ರಮ ಜಾತಿ–ರಾಜಕಾರಣದಿಂದ ದೂರವಿರಲಿ: ದಿಂಗಾಲೇಶ್ವರ ಶ್ರೀಗಳ ಎಚ್ಚರಿಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ವೀರೇಶ್ವರ ಪುಣ್ಯಾಶ್ರಮವು ತ್ರಿಕಾಲಜ್ಞಾನಿ ಹಾನಗಲ್ ಕುಮಾರೇಶ್ವರರ ಕನಸಿನ ಕೂಸಾಗಿದ್ದು, ಅದರ ಪಾವಿತ್ರ್ಯ, ಪರಂಪರೆ ಮತ್ತು ಮೂಲ ತತ್ವಗಳಿಗೆ ಯಾವುದೇ ಧಕ್ಕೆ ಬರದಂತೆ ಎಲ್ಲರೂ ಜಾಗರೂಕರಾಗಬೇಕು ಎಂದು ಶಿರಹಟ್ಟಿಯ ಜಗದ್ಗುರು ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ನಡೆದ ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಕೀರ್ತನ ಸಮ್ಮೇಳನ ಹಾಗೂ ಅಂಧರ ಗೋಷ್ಠಿಯ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಆಶ್ರಮವು ಎಲ್ಲರಿಗೂ ತಾಯಿಯಂತಿದ್ದು, ಅದರ ಮೇಲೆ ಯಾರೇ ಕಣ್ಣು ಹಾಕಿದರೂ ಸಹಿಸುವ ಪ್ರಶ್ನೆಯೇ ಇಲ್ಲ. ಆಶ್ರಮದ ರಕ್ಷಣೆ ಮತ್ತು ಪಾವಿತ್ರ್ಯ ಕಾಪಾಡುವುದು ಪ್ರತಿಯೊಬ್ಬ ಭಕ್ತನ ಜವಾಬ್ದಾರಿ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ರಾಜ್ಯದ ಅನೇಕ ಧಾರ್ಮಿಕ ಸಂಸ್ಥೆಗಳು ಮತ್ತು ಗೌರವಾನ್ವಿತ ಸ್ಥಾನಗಳು ವಿವಾದಕ್ಕೆ ಒಳಗಾಗುತ್ತಿರುವುದು ವಿಷಾದನೀಯ. ಆದರೆ ಸತ್ಯ ಎಲ್ಲರಿಗೂ ಗೊತ್ತಿದ್ದರೂ ಪ್ರತಿಕ್ರಿಯಿಸುವ ಸಮಯ ಇನ್ನೂ ಬಂದಿಲ್ಲ. ಆಶ್ರಮದ ಕಲಾವಿದರು, ಭಕ್ತರು ಹಾಗೂ ಆಡಳಿತ ಮಂಡಳಿ ತಾಳ್ಮೆ ಕಾಪಾಡಿಕೊಂಡರೆ ಎಲ್ಲ ಸಮಸ್ಯೆಗಳಿಗೂ ಸೂಕ್ತ ಪರಿಹಾರ ಸಿಗಲಿದೆ ಎಂದು ಹೇಳಿದರು.

ಯಾರಾದರೂ ಆಶ್ರಮದ ಸಮಸ್ಯೆ ಬಗೆಹರಿಸುವ ನೆಪದಲ್ಲಿ ಪ್ರವೇಶಿಸಲು ಯತ್ನಿಸಿದರೆ ಎಚ್ಚರಿಕೆಯಿಂದಿರಬೇಕು. ಕಾಣದ ಕೈಗಳು ಕೆಲವೊಮ್ಮೆ ಧಾರ್ಮಿಕ ಸಂಸ್ಥೆಗಳನ್ನೇ ಗುರಿಯಾಗಿಸುತ್ತವೆ. ಪುಣ್ಯಕ್ಷೇತ್ರದೊಳಗೆ ಪ್ರವೇಶಿಸುವಾಗ ಪಾದರಕ್ಷೆಗಳಷ್ಟೇ ಅಲ್ಲ, ಜಾತಿ ಮತ್ತು ರಾಜಕಾರಣವನ್ನೂ ಹೊರಗಿಟ್ಟು ಬರಬೇಕು ಎಂದು ಕಿವಿಮಾತು ಹೇಳಿದರು.

ಪಂಚಾಕ್ಷರಿ ಗವಾಯಿಗಳು ಮತ್ತು ಪುಟ್ಟರಾಜ ಗವಾಯಿಗಳು ರಾಜಕಾರಣ ಹಾಗೂ ಜಾತೀಯತೆಯಿಂದ ದೂರವಿದ್ದು ಸಂಗೀತ, ಸಾಹಿತ್ಯ, ಕಲೆ **3ನೇ ಪುಟಕ್ಕೆ.....**

> 'ವೀರೇಶ್ವರ ಪುಣ್ಯಾಶ್ರಮದೊಳಗೆ ಜಾತಿ, ರಾಜಕಾರಣ ಹಾಗೂ ಸ್ವಾರ್ಥದ ಪ್ರವೇಶಕ್ಕೆ ಅವಕಾಶ ಇರಬಾರದು. ಪರಂಪರೆ ಮತ್ತು ಪಾವಿತ್ರ್ಯ ಉಳಿಸುವುದು ನಮ್ಮೆಲ್ಲರ ಸಾಮೂಹಿಕ ಜವಾಬ್ದಾರಿ.'
>
> **–ಜ. ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು**

### ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸೇರಿ ಗಣ್ಯರ ಭಾಗಿ

## ಗದಗದಲ್ಲಿ ಇಂದು ಉಭಯ ಶ್ರೀಗಳ ಜಾತ್ರೆ ವೈಭವ

### ಪುಟ್ಟರಾಜ ಪ್ರಶಸ್ತಿ, ಗ್ರಂಥ ಲೋಕಾರ್ಪಣೆ, ಅಹೋರಾತ್ರಿ ಸಂಗೀತ

**ವಿಜಯಸಾಕ್ಷಿ ಸುದ್ದಿ, ಗದಗ**

ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 82ನೇ ಹಾಗೂ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ನಡೆಯುತ್ತಿರುವ ಉಭಯ ಶ್ರೀಗಳ ಜಾತ್ರಾ ಮಹೋತ್ಸವದಲ್ಲಿ ಜುಲೈ 4ರಂದು ಸಂಜೆ 6 ಗಂಟೆಗೆ ಶಿವಾನುಭವಗೋಷ್ಠಿ ನಡೆಯಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಗದುಗಿನ ತೋಂಟದಾರ್ಯ ಶ್ರೀಮಠದ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಲಿದ್ದಾರೆ. ಇಳಕಲ್, ಹೂವಿನಶಿಗ್ಲಿ, ಗುಳೇದಗುಡ್ಡ, ಅಡ್ನೂರ, ಜಿಗೇರಿ, ಕೂಡಲ, ಮೈಸೂರು ಹಾಗೂ ಅಂತೂರಬೆಂತೂರಿನ ವಿವಿಧ ಮಠಾಧೀಶರು ಸಮ್ಮುಖ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಫ್.ಎಚ್. ಚಕ್ಕಪ್ಪನವರ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಶಾಸಕ ಎನ್.ಎಚ್. ಕೋನರಡ್ಡಿ ಹಾಗೂ ಮಾಜಿ ಶಾಸಕ ಬಿ.ಆರ್. ಯಾವಗಲ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ 2026ನೇ ಸಾಲಿನ ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿಯನ್ನು ಕೀರ್ತನ ಕ್ಷೇತ್ರದಲ್ಲಿ ಕುಸಗೂರಿನ ನೀಲಕಂಠ ಶಾಸ್ತ್ರಿ ಅವರಿಗೆ ಪ್ರದಾನ ಮಾಡಲಾಗುವುದು. ಕುಮಾರಶ್ರೀ ಪ್ರಶಸ್ತಿಯನ್ನು ಚೆನ್ನೈನ ಶಹನಾಯಿ ವಾದಕ ಪದ್ಮಶ್ರೀ ಡಾ. ಎಸ್. ಬಾಳೇಶ ಭಜಂತ್ರಿ, ಡೋಣಿಯ ಪ್ರವಚನಕಾರ ಶಶಿಧರ ಶಾಸ್ತ್ರಿ ಹಿರೇಮಠ ಹಾಗೂ ಹೊನ್ನಿಗನೂರಿನ ತಬಲಾ ವಾದಕ ಬಸವರಾಜ ಅಮರಗೋಳ ಅವರಿಗೆ ಪ್ರದಾನಿಸಲಾಗುವುದು.

ಇದೇ ವೇಳೆ 'ಗಾನಯೋಗಿ ಶಿವಯೋಗಿ ಶ್ರೀ ಪರಮಪಂಚಾಕ್ಷರ ಮಹಾಪುರಾಣ' ಹಾಗೂ 'ಶ್ರೀ ಶಿವಶರಣೆ ಹೇಮರಡ್ಡಿ ಮಲ್ಲಮ್ಮಾಂಬೆಯ ಪುರಾಣ' ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ.

ರಾತ್ರಿ 10 ಗಂಟೆಯಿಂದ ನಾಡಿನ ವಿವಿಧ ಭಾಗಗಳ ಕಲಾವಿದರಿಂದ ಅಹೋರಾತ್ರಿ ಸಂಗೀತ ಸಮಾರಾಧನೆ ನಡೆಯಲಿದೆ.

ಇದಕ್ಕೂ ಮುನ್ನ ಬೆಳಿಗ್ಗೆ 11 ಗಂಟೆಗೆ ಸನ್ಮಾನ ಸಮಾರಂಭ ಜರುಗಲಿದ್ದು, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಭಕ್ತರನ್ನು ಗೌರವಿಸಲಾಗುವುದು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

### ಬೂದಿಹಾಳ ಹಳ್ಳದಲ್ಲಿ ಬೃಹತ್ ಗುಂಡಿಗಳು; ಪಟ್ಟಾ ಜಮೀನಿನಲ್ಲೂ ರಾಜಾರೋಷ ಗಣಿಗಾರಿಕೆ ಆರೋಪ

## ಹಳ್ಳವನ್ನೇ ನುಂಗಿದ ಅಕ್ರಮ ಮರಳುಗಾರಿಕೆ..!

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಬೂದಿಹಾಳ ಸೇರಿದಂತೆ ಕೆಲ ಸರ್ಕಾರಿ ಹಳ್ಳಗಳು ಹಾಗೂ ಪಟ್ಟಾ ಜಮೀನುಗಳಲ್ಲಿ ಯಾವುದೇ ಅಧಿಕೃತ ಪರವಾನಿಗೆ ಇಲ್ಲದೆ ಅಕ್ರಮ ಮರಳುಗಾರಿಕೆ ಅವ್ಯಾಹತವಾಗಿ ನಡೆಯುತ್ತಿದ್ದು, ಇದರಿಂದ ಜಾನುವಾರುಗಳಿಗೆ ನೀರಿನ ಆಸರೆಯಾಗಬೇಕಿದ್ದ ಹಳ್ಳಗಳು ಅಪಾಯದ ತಾಣಗಳಾಗಿ ಮಾರ್ಪಟ್ಟಿವೆ. ಈ ಕುರಿತು ಸಂಬಂಧಿಸಿದ ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೂದಿಹಾಳ ಹಳ್ಳದಲ್ಲಿ ಯಂತ್ರೋಪಕರಣಗಳ ಮೂಲಕ ಆಳವಾದ ಗುಂಡಿಗಳನ್ನು ತೋಡಿ ಮರಳು ಹೊರತೆಗೆಯಲಾಗುತ್ತಿದೆ. ಮಳೆಗಾಲದಲ್ಲಿ ಈ ಗುಂಡಿಗಳಲ್ಲಿ ನೀರು ತುಂಬಿದರೆ ಜನ–ಜಾನುವಾರುಗಳ ಜೀವಕ್ಕೆ ಅಪಾಯ ಉಂಟಾಗುವ ಸಾಧ್ಯತೆ ಇದೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ.

ಇದೇ ರೀತಿ ಪಟ್ಟಾ ಜಮೀನುಗಳಲ್ಲಿಯೂ ಯಾವುದೇ ಪರವಾನಿಗೆ ಪಡೆಯದೆ ಹಗಲು–ರಾತ್ರಿ ಮರಳು ತೆಗೆಯಲಾಗುತ್ತಿದ್ದು, ಮಣ್ಣು ಮಿಶ್ರಿತ ಮರಳನ್ನು ಹಳ್ಳದಲ್ಲೇ ಶುಚಿಗೊಳಿಸಿ ಸಾಗಾಟ ಮಾಡಲಾಗುತ್ತಿದೆ ಎನ್ನಲಾಗಿದೆ. ಅಕ್ರಮ ಮರಳುಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೂ ಅಪಾರ ನಷ್ಟ ಉಂಟಾಗುತ್ತಿದ್ದರೂ ಅಧಿಕಾರಿಗಳು ಪರಿಣಾಮಕಾರಿ ಕ್ರಮ ಕೈಗೊಳ್ಳುತ್ತಿಲ್ಲ. ಸರ್ಕಾರಿ ಹಳ್ಳ ಮತ್ತು ಪಟ್ಟಾ ಜಮೀನುಗಳಲ್ಲಿ ಪರವಾನಿಗೆ ಇಲ್ಲದೆ ನಡೆಯುತ್ತಿರುವ ಗಣಿಗಾರಿಕೆಗೆ ಕಡಿವಾಣ ಹಾಕುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ. ಈ



> "ಸರ್ಕಾರಿ ಹಳ್ಳ ಹಾಗೂ ಪಟ್ಟಾ ಜಮೀನುಗಳಲ್ಲಿ ಮರಳು ಗಣಿಗಾರಿಕೆಗೆ ಯಾವುದೇ ಪರವಾನಿಗೆ ನೀಡಿಲ್ಲ. ಅಕ್ರಮ ಚಟುವಟಿಕೆ ಕಂಡುಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು."
>
> **–ಕೆ. ರಾಘವೇಂದ್ರ ರಾವ್, ತಹಸೀಲ್ದಾರ್**

ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ್ ಕೆ. ರಾಘವೇಂದ್ರ ರಾವ್, ಪರವಾನಿಗೆ ಇಲ್ಲದೆ ಅಕ್ರಮ ಮರಳು ಸಾಗಾಟ ನಡೆಸಿದವರ ವಿರುದ್ಧ ಈಗಾಗಲೇ ನಾಲ್ಕು ಪ್ರಕರಣಗಳನ್ನು ದಾಖಲಿಸಲಾಗಿದೆ. ಪ್ರಸ್ತುತ ಸರ್ಕಾರಿ ಹಳ್ಳ ಅಥವಾ ಪಟ್ಟಾ ಜಮೀನುಗಳಲ್ಲಿ ಮರಳು ಗಣಿಗಾರಿಕೆಗೆ ಯಾವುದೇ ಪರವಾನಿಗೆ ನೀಡಿಲ್ಲ. ಅಕ್ರಮ ಚಟುವಟಿಕೆ ಕಂಡುಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

### 15 ವರ್ಷಗಳ ಮಧುಮೇಹಕ್ಕೆ ಅಂತ್ಯ; ಡಯಾಲಿಸಿಸ್‌ಗೂ ಗುಡ್‌ಬೈ, ಗದಗ ಯುವಕನಿಗೆ ಹೊಸ ಜೀವನ

## ಎರಡು ಅಂಗಾಂಗ ಕಸಿ; ಗದಗ ಯುವಕನಿಗೆ ಹೊಸ ಜೀವನ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಟೈಪ್–1 ಮಧುಮೇಹ ಹಾಗೂ ಅಂತಿಮ ಹಂತದ ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದ ಗದಗದ ಯುವಕ ಮೇಘರಾಜ್ ಮಾರುತಿ ಕಟ್ಟಿಮನಿ ಅವರಿಗೆ ಬೆಂಗಳೂರಿನ ಆಸ್ಟರ್ ಆರ್‌ವಿ ಆಸ್ಪತ್ರೆಯ ತಜ್ಞ ವೈದ್ಯರು ಒಂದೇ ಶಸ್ತ್ರಚಿಕಿತ್ಸೆಯಲ್ಲಿ ಕಿಡ್ನಿ ಮತ್ತು ಮೇದೋಜ್ಜೀರಕ ಗ್ರಂಥಿ (ಪ್ಯಾಂಕ್ರಿಯಾಸ್) ಕಸಿಯನ್ನು ಯಶಸ್ವಿಯಾಗಿ ನೆರವೇರಿಸಿ ಹೊಸ ಜೀವನ ನೀಡಿದ್ದಾರೆ.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆಸ್ಪತ್ರೆಯ ಕಸಿ ತಜ್ಞ ಡಾ. ರೊಮ್ಮೆಲ್ ಎಸ್. ಹಾಗೂ ಹೆಪಟಾಲಜಿ ಮತ್ತು ಇಂಟಿಗ್ರೇಟೆಡ್ ಲಿವರ್ ಕೇರ್ ವಿಭಾಗದ ಹಿರಿಯ ಸಲಹೆಗಾರ ಡಾ. ನವೀನ್




ಗುಂಜೂ, ಸುಮಾರು 15 ವರ್ಷಗಳಿಂದ ಟೈಪ್–1 ಮಧುಮೇಹದಿಂದ ಬಳಲುತ್ತಿದ್ದ ಮೇಘರಾಜ್ ಅವರ ಆರೋಗ್ಯ ಕ್ರಮೇಣ ಹದಗೆಟ್ಟು ವಾರಕ್ಕೆ ಮೂರು ಬಾರಿ ಡಯಾಲಿಸಿಸ್ ಮಾಡಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿತ್ತು ಎಂದು ತಿಳಿಸಿದರು.

ರಕ್ತದಲ್ಲಿನ ಸಕ್ಕರೆ ಮಟ್ಟದ ಏರಿಳಿತ, ಹೃದಯ ಹಾಗೂ ನರ ಸಂಬಂಧಿತ ಸಮಸ್ಯೆಗಳ ನಡುವೆಯೂ ವೈದ್ಯರ ತಂಡ ಶಸ್ತ್ರಚಿಕಿತ್ಸೆಗೆ ಮುನ್ನ ಅವರ ಆರೋಗ್ಯವನ್ನು ಸ್ಥಿರಗೊಳಿಸಿತು. ಮೂರು–ನಾಲ್ಕು ತಿಂಗಳ ಕಾಯುವಿಕೆಯ ಬಳಿಕ ಸುಮಾರು 6ರಿಂದ 8 ಗಂಟೆಗಳ ಅವಧಿಯ ಸಂಕೀರ್ಣ ಶಸ್ತ್ರಚಿಕಿತ್ಸೆಯಲ್ಲಿ ಎರಡೂ ಅಂಗಾಂಗಗಳನ್ನು ಯಶಸ್ವಿಯಾಗಿ ಕಸಿ ಮಾಡಲಾಯಿತು.

ಶಸ್ತ್ರಚಿಕಿತ್ಸೆಯಾಗಿ ಆರು ತಿಂಗಳು ಕಳೆದಿದ್ದು, ಮೇಘರಾಜ್ ಸಂಪೂರ್ಣ ಚೇತರಿಸಿಕೊಂಡಿದ್ದಾರೆ. ಈಗ ಅವರಿಗೆ ಡಯಾಲಿಸಿಸ್, ಇನ್ಸುಲಿನ್ ಚುಚ್ಚುಮದ್ದು ಅಥವಾ ರಕ್ತದೊತ್ತಡದ ಹಲವು ಮಾತ್ರೆಗಳ ಅಗತ್ಯವಿಲ್ಲ. ಕಸಿ ಮಾಡಿದ ಕಿಡ್ನಿ ಹಾಗೂ ಪ್ಯಾಂಕ್ರಿಯಾಸ್ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರು ಆರೋಗ್ಯಕರ ಹಾಗೂ ಸ್ವತಂತ್ರ ಜೀವನ ನಡೆಸುತ್ತಿದ್ದಾರೆ ಎಂದು ವೈದ್ಯರು ತಿಳಿಸಿದರು.

> "ಟೈಪ್–1 ಮಧುಮೇಹದಿಂದ ಕಿಡ್ನಿ ವೈಫಲ್ಯಕ್ಕೆ ತುತ್ತಾದ ಆಯ್ದ ರೋಗಿಗಳಿಗೆ ಕಿಡ್ನಿ ಮತ್ತು ಪ್ಯಾಂಕ್ರಿಯಾಸ್ ಜಂಟಿ ಕಸಿಯೇ ಅತ್ಯುತ್ತಮ ಚಿಕಿತ್ಸೆ. ಇದು ಜೀವಿತಾವಧಿ ಹೆಚ್ಚಿಸುವುದರ ಜೊತೆಗೆ ಡಯಾಲಿಸಿಸ್ ಮತ್ತು ಇನ್ಸುಲಿನ್ ಮೇಲಿನ ಅವಲಂಬನೆಯನ್ನು ಸಂಪೂರ್ಣವಾಗಿ ನಿವಾರಿಸುತ್ತದೆ."
>
> **–ಡಾ. ರೊಮ್ಮೆಲ್ ಎಸ್.**

ಒಗ್ಗಟ್ಟೇ ವೀರಶೈವ ಲಿಂಗಾಯತರ ಮಹಾಶಕ್ತಿ

# ಶ್ರೀ ಶಿವರಂಭಾಪುರೀಶ್ವರ ಸಭಾಂಗಣ' ಲೋಕಾರ್ಪಣೆ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು



ವಿಜಯಸಾಕ್ಷಿ ಸುದ್ದಿ, ಗದಗ

ವೀರಶೈವ ಲಿಂಗಾಯತ ಸಮಾಜದ ಶಕ್ತಿ ಅಪಾರವಾಗಿದ್ದು, ಸಮಾಜದ ವಿವಿಧ ಸಂಘಟನೆಗಳು ಪರಸ್ಪರ ಸಹಕಾರ, ಸೌಹಾರ್ದತೆ ಹಾಗೂ ಸಮನ್ವಯದಿಂದ ಒಂದಾಗಿ ಕಾರ್ಯನಿರ್ವಹಿಸಿದರೆ ಸಮಾಜದ ಅಭ್ಯುದಯಕ್ಕೆ ಹೊಸ ದಿಕ್ಕು ದೊರೆಯಲಿದೆ ಎಂದು ಬಾಳೆಹೊನ್ನೂರಿನ ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಜಗದ್ಗುರು ಶ್ರೀ ಶ್ರೀ ಶ್ರೀ 1008 ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಹೇಳಿದರು.

ಗದಗ ನಗರದ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರದ ಆವರಣದಲ್ಲಿ ನೂತನವಾಗಿ ನಿರ್ಮಿಸಲಾದ 'ಶ್ರೀ ಶಿವರಂಭಾಪುರೀಶ್ವರ ಸಭಾಂಗಣ'ವನ್ನು ಗುರುವಾರ ಲೋಕಾರ್ಪಣೆಗೊಳಿಸಿ ಆಶೀರ್ವಚನ ನೀಡಿದ ಅವರು, 'ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ಧ್ಯೇಯದೊಂದಿಗೆ ನಿರ್ಮಿಸಿರುವ ಈ ಸಭಾಂಗಣ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಮಾಜಮುಖಿ ಚಟುವಟಿಕೆಗಳ ಕೇಂದ್ರವಾಗಿ ಸಮಾಜದಲ್ಲಿ ಏಕತೆ ಮತ್ತು ಸದ್ಭಾವನೆ ಬೆಳೆಸಲಿ ಎಂದು ಹಾರೈಸಿದರು.

ಸಭಾಂಗಣ ನಿರ್ಮಾಣದ ಹಿನ್ನೆಲೆಯನ್ನು ವಿವರಿಸಿದ ಶ್ರೀಗಳು, 1975–76ರಲ್ಲಿ ತ್ರಿಕಾಲ ವಂದನೀಯ ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಮಾರ್ಗದರ್ಶನದಲ್ಲಿ ಮಾಜಿ ಸಚಿವ ಕೆ.ಎಚ್. ಪಾಟೀಲ ಅವರ ಸಹಕಾರದಿಂದ ಮಾಂಗಲ್ಯ ಮಂದಿರಕ್ಕೆ ಅಡಿಗಲ್ಲು ಹಾಕಲಾಗಿತ್ತು. ಬಳಿಕ ಕಾಮಗಾರಿ ಸ್ಥಗಿತಗೊಂಡಿದ್ದರೂ, 1992ರಲ್ಲಿ ಪೀಠಾರೋಹಣದ ನಂತರ ಭಕ್ತರ ಸಹಕಾರದಿಂದ ಮತ್ತೆ ಆರಂಭಗೊಂಡಿತು ಎಂದು ತಿಳಿಸಿದರು.

ಬಸಣ್ಣ ಮಲ್ಲಾಡದ ಅವರ ಮುಂದಾಳತ್ವದಲ್ಲಿ ಸುಮಾರು ಒಂದೂವರೆ ವರ್ಷದಲ್ಲಿ 75 ಲಕ್ಷದಿಂದ 1 ಕೋಟಿ ರೂಪಾಯಿ ವೆಚ್ಚದಲ್ಲಿ ಮಾಂಗಲ್ಯ ಮಂದಿರ ನಿರ್ಮಾಣಗೊಂಡಿದ್ದು, ಇದೀಗ ಭಕ್ತರ ಅನುಕೂಲಕ್ಕಾಗಿ ಸುಮಾರು 36 ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ 'ಶ್ರೀ ಶಿವರಂಭಾಪುರೀಶ್ವರ ಸಭಾಂಗಣ' ನಿರ್ಮಿಸಲಾಗಿದೆ ಎಂದು ಹೇಳಿದರು. ವೀರಗಂಗಾಧರ ಜಗದ್ಗುರುಗಳ ಕಾವ್ಯನಾಮ 'ಶಿವರಂಭಾಪುರಿ' ಆಧರಿಸಿ ಸಭಾಂಗಣಕ್ಕೆ ಈ ಹೆಸರು ನಾಮಕರಣ ಮಾಡಲಾಗಿದೆ ಎಂದರು.

ಮಾರ್ಕೆಟ್ ಸಮಿತಿಯಿಂದ ಪಡೆದ 30120 ಅಡಿ ಜಾಗದಲ್ಲಿ ಆಧುನಿಕ ಸೌಲಭ್ಯಗಳಿರುವ ಕೊಠಡಿಗಳನ್ನು ನಿರ್ಮಿಸುವ ಯೋಜನೆ ರೂಪಿಸಲಾಗಿದ್ದು, ಅದರ ಜವಾಬ್ದಾರಿಯನ್ನು ಇಂಜಿನಿಯರ್ ಅಮರನಾಥ ಸೋಮಣ್ಣ ಮಲ್ಲಾಡದ ಅವರಿಗೆ ವಹಿಸಲಾಗುವುದು ಎಂದು ತಿಳಿಸಿದರು.

> "ವೀರಶೈವ ಲಿಂಗಾಯತ ಸಮಾಜದ ಶಕ್ತಿ ಅಪಾರ. ಸಂಘಟನೆಗಳು ಭಿನ್ನಾಭಿಪ್ರಾಯ ಮರೆತು ಒಂದಾದ–ರೆ ಸಮಾಜದ ಅಭಿವೃದ್ಧಿಯನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ."
> –ಜಗದ್ಗುರು ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು

ವೀರಶೈವ ಲಿಂಗಾಯತ ಸಮಾಜದಲ್ಲಿರುವ ಶಕ್ತಿಯನ್ನು ವಿಭಜಿಸಲು ಕೆಲವರು ಪ್ರಯತ್ನಿಸುತ್ತಿದ್ದಾರೆ. ಅಂತಹ ಪ್ರಯತ್ನಗಳಿಗೆ ಅವಕಾಶ ನೀಡದೆ ಎಲ್ಲ ಸಂಘಟನೆಗಳು ಮುಷ್ಟಿಯಂತೆ ಒಂದಾಗಿ ಸಮಾಜದ ಹಿತಕ್ಕಾಗಿ ಕಾರ್ಯನಿರ್ವಹಿಸಬೇಕು. ಪಂಚಪೀಠಗಳ ವಿಚಾರದಲ್ಲೂ ಭಕ್ತರು ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಮೂಲ ವಾಹಿನಿಯಲ್ಲಿ ಒಂದಾಗಿ ಸಮಾಜದ ಶ್ರೇಯಸ್ಸಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಕಾಶಿ ಪೀಠದ ನೂತನ ಜಗದ್ಗುರುಗಳು ಆಷಾಢ ಮಾಸದ ವಿಶೇಷ ಪೂಜೆಯನ್ನು ಇದೇ ಮಾಂಗಲ್ಯ ಮಂದಿರದಲ್ಲಿ ಐದು ದಿನಗಳ ಕಾಲ ನೆರವೇರಿಸಲಿದ್ದು, ಮದುವೆ ಕಾರ್ಯಕ್ರಮಗಳಿಲ್ಲದ ದಿನಗಳಲ್ಲಿ ಪಂಚಪೀಠಗಳ ಧಾರ್ಮಿಕ ಕಾರ್ಯಕ್ರಮಗಳಿಗೆ ಮಂದಿರವನ್ನು ಮೀಸಲಿಡಲಾಗುವುದು ಎಂದು ಘೋಷಿಸಿದರು.

ಕಾರ್ಯಕ್ರಮದಲ್ಲಿ ಸುಳ್ಳದ ಪಂಚಗ್ರಹ ಮಠದ ಪೂಜ್ಯ ಶಿವಸಿದ್ದರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ, ನರಸಾಪುರ–ಕದಾಂಪೂರದ ಪೂಜ್ಯ ವೀರಭದ್ರೇಶ್ವರ ಶಿವಾಚಾರ್ಯ ಸ್ವಾಮೀಜಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಡಾ. ರಾಜಗುರು ಗುರುಸ್ವಾಮಿ ಕಲಕೇರಿ, ದುಂಡಪ್ಪ ಮಲ್ಲಾಡದ, ಬಸವಣ್ಣೆಪ್ಪ ಪುರದ, ಚಂದ್ರು ಬಾಳಿಹಳ್ಳಿಮಠ, ರಾಜಣ್ಣ ಮಲ್ಲಾಡದ, ಮಂಜುನಾಥ ಬೇಲೇರಿ, ಮಂಜುನಾಥ ಅಬ್ಬಿಗೇರಿ, ಡಾ. ಶ್ರೀಶೈಲಪ್ಪ ಮಲ್ಲಾಡದ, ಸುರೇಶ ಅಬ್ಬಿಗೇರಿ, ಅಮರನಾಥ ಮಲ್ಲಾಡದ ಸೇರಿದಂತೆ ಸಮಾಜದ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಸರ್ಕಾರಿ ಉರ್ದು ಶಾಲೆಯಲ್ಲಿ ಎಲ್‌ಕೆಜಿ–ಯುಕೆಜಿ ಆರಂಭ

# ಮಕ್ಕಳ ಶಿಕ್ಷಣಕ್ಕೆ ನೆರವೇ ಶ್ರೇಷ್ಠ ದಾನ

## ಡೆಸ್ಕ್, ಸಮವಸ್ತ್ರ ಹಾಗೂ ಪುಸ್ತಕಗಳ ವಿತರಣೆ



ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಾಲಾ ಮಕ್ಕಳ ಶಿಕ್ಷಣಕ್ಕಾಗಿ ನೀಡುವ ದಾನವೇ ಅತ್ಯಂತ ಶ್ರೇಷ್ಠವಾದ ದಾನವಾಗಿದ್ದು, ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಿದರೆ ಮಾತ್ರ ಬಡ ಮಕ್ಕಳ ಭವಿಷ್ಯ ಉಜ್ವಲವಾಗಲಿದೆ ಎಂದು ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಮುಸ್ತಾಕ್ ಅಕ್ಕಿ ಹೇಳಿದರು.

ಪಟ್ಟಣದ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯಲ್ಲಿ ನೂತನವಾಗಿ ಆಂಗ್ಲ ಮಾಧ್ಯಮದ ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳ ಉದ್ಘಾಟನೆ, ಡೆಸ್ಕ್ ಚೇರ್, ಸಮವಸ್ತ್ರ ಹಾಗೂ ಉಚಿತ ಪಠ್ಯಪುಸ್ತಕ ವಿತರಣಾ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಾಲೆಯ ಅಗತ್ಯವನ್ನು ಮನಗಂಡು ಸಮಾಜಸೇವಕ ಪೀರಸಾಬ ಶೇಖ ಅವರು ಡೆಸ್ಕ್ ಹಾಗೂ ಚೇರ್‌ಗಳನ್ನು ಉಚಿತವಾಗಿ ನೀಡಿರುವುದು ಶ್ಲಾಘನೀಯ ಕಾರ್ಯವಾಗಿದೆ. ಮಕ್ಕಳ ಶಿಕ್ಷಣಕ್ಕಾಗಿ ಸಲ್ಲಿಸುವ ಸೇವೆ ಅತ್ಯಂತ ಪವಿತ್ರವಾದದ್ದು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಸದಸ್ಯರ ಸಹಕಾರದಿಂದ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್, ಪಠ್ಯಪುಸ್ತಕ ಹಾಗೂ ಸಮವಸ್ತ್ರಗಳನ್ನು ವಿತರಿಸಲಾಯಿತು.

ಪೀರಸಾಬ ಶೇಖ ಮಾತನಾಡಿ, ಸರ್ಕಾರಿ ಉರ್ದು ಶಾಲೆಯಲ್ಲಿ ಆಂಗ್ಲ ಮಾಧ್ಯಮದ ಎಲ್‌ಕೆಜಿ ಹಾಗೂ ಯುಕೆಜಿ ಆರಂಭಗೊಂಡಿದ್ದು, ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳನ್ನು ದಾಖಲಿಸಿ ಈ ಸೌಲಭ್ಯದ ಪ್ರಯೋಜನ ಪಡೆಯಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಆಫ್ರೀನಾಬಾನು ನದ್ದಿಮುಲ್ಲಾ, ದಾವಲಸಾಬ ರಮಗೇರಿ, ಜಾಫರ್ ಲಾಡಸಾಬನವರ, ತೌಶೀಫ್ ಮುಲ್ಲಾ, ಖೈರುನಬಿ ಲಾಡಸಾಬನವರ, ಪ್ರಧಾನ ಗುರುಮಾತೆ ಅಭೀದಾಬೇಗಂ ಬದಾಮಿ, ರೇಷ್ಮಾ ನಾಯಕ, ಆಯಿಷಾ ಡಾಲಾಯತ, ಬತುಲ್ ಜಮಾಲಸಾಬನವರ, ಇಶ್ರತ್ ದಲೀಲ ಹಾಗೂ ಎಸ್‌ಡಿಎಂಸಿ ಸದಸ್ಯರು ಉಪಸ್ಥಿತರಿದ್ದರು.

ಡಾ. ಪುರದ ಪ್ರತಿಷ್ಠಾನದಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆಯಲ್ಲಿ ಡಾ. ರಮೇಶ ಕಲ್ಲನಗೌಡರ

# ರೋಗಿಯ ನಗು ವೈದ್ಯನ ದೊಡ್ಡ ಪ್ರಶಸ್ತಿ




ವಿಜಯಸಾಕ್ಷಿ ಸುದ್ದಿ, ಗದಗ

ವೈದ್ಯಕೀಯ ವೃತ್ತಿ ಅತ್ಯಂತ ಪವಿತ್ರವಾದದ್ದು. ಸಮಾಜ ವೈದ್ಯರನ್ನು ದೇವರ ಸಮಾನವಾಗಿ ಗೌರವಿಸುತ್ತದೆ. ಹಗಲು–ರಾತ್ರಿ ಎನ್ನದೆ ರೋಗಿಗಳ ಸೇವೆಯಲ್ಲಿ ತೊಡಗುವ ವೈದ್ಯರ ಕಾರ್ಯ ಮಾನವೀಯತೆಯ ಪ್ರತೀಕವಾಗಿದೆ ಎಂದು ಮುಳಗುಂದ ಸರ್ಕಾರಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಮೇಶ ಎಂ. ಕಲ್ಲನಗೌಡರ ಹೇಳಿದರು.

ನಗರದ ಡಾ. ಪುರದ ಪ್ರತಿಷ್ಠಾನ ಹಮ್ಮಿಕೊಂಡಿದ್ದ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ವೈದ್ಯಕೀಯ ವಿಜ್ಞಾನದಲ್ಲಿ ಆಗಿರುವ ಆವಿಷ್ಕಾರಗಳಿಂದ ಇಂದು ಅನೇಕ ಗಂಭೀರ ರೋಗಗಳಿಗೆ ಪರಿಣಾಮಕಾರಿ ಚಿಕಿತ್ಸೆ ಸಾಧ್ಯವಾಗಿದೆ. ವೈದ್ಯರ ಹಸನ್ಮುಖ, ಶಾಂತ ಹಾಗೂ ಆತ್ಮೀಯ ಸೇವೆಯೂ ರೋಗಿಯ ಗುಣಮುಖತೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯುವ ಆಯುರ್ವೇದ ವೈದ್ಯ ಡಾ. ಕುಮಾರ ಎಸ್. ಕಂಠಿಮಠ ಅವರ ವಿಶೇಷ ಸಾಧನೆಯನ್ನು ಗುರುತಿಸಿ ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ರೋಗಿಗಳು ವೈದ್ಯರ ಮೇಲೆ ಇಡುವ ವಿಶ್ವಾಸ ಮತ್ತು ನಂಬಿಕೆಯೇ ವೈದ್ಯರ ಸೇವೆಗೆ ಮತ್ತಷ್ಟು ಶಕ್ತಿ ತುಂಬುತ್ತದೆ. ಔಷಧ ಸೇವನೆಯಷ್ಟೇ ರೋಗಗಳು ಬರದಂತೆ ಮುನ್ನೆಚ್ಚರಿಕೆ ವಹಿಸುವುದು ಆರೋಗ್ಯಕರ ಜೀವನದ ಮೂಲಮಂತ್ರವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ವೈದ್ಯ ಡಾ. ಉಮೇಶ ವಿ. ಪುರದ ಅವರ 64ನೇ ಜನ್ಮದಿನವನ್ನು ಆಚರಿಸಲಾಯಿತು. ಮಾತನಾಡಿದ ಅವರು, ಎಲ್ಲ ಭಾಗ್ಯಗಳಿಗಿಂತ ಆರೋಗ್ಯ ಭಾಗ್ಯವೇ ಶ್ರೇಷ್ಠ. ಆರೋಗ್ಯವನ್ನು ಪ್ರತಿಯೊಬ್ಬರೂ ತಮ್ಮ ಜೀವನಶೈಲಿಯ ಮೂಲಕ ಕಾಪಾಡಿಕೊಳ್ಳಬೇಕು. ಹಿತಮಿತ ಆಹಾರ, ನಿಯಮಿತ ವ್ಯಾಯಾಮ, ಧ್ಯಾನ, ಪ್ರಾಣಾಯಾಮ ಹಾಗೂ ಸಂತೃಪ್ತ ಜೀವನಶೈಲಿಯೇ ಉತ್ತಮ ಆರೋಗ್ಯದ ಸೂತ್ರಗಳಾಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೈದ್ಯರ ದಿನಾಚರಣೆಯ ಮಹತ್ವ ಕುರಿತು ಡಾ. ಶಂಭು, ಡಾ. ವೀರೇಶ, ಡಾ. ಕಾವ್ಯ, ಶ್ರೀಮತಿ ಸಿಬಿಲ್ ನಿಲುಗಲ್, ಡಾ. ಎಸ್.ಎಸ್. ಅವ್ವಣ್ಣಿ, ಶ್ರೀಮತಿ ಪೂರ್ವಿತಾ ಹಾಗೂ ವಿದ್ಯಾರ್ಥಿಗಳು ಮಾತನಾಡಿದರು.

ವಿದ್ಯಾರ್ಥಿನಿಯರಿಂದ ಪ್ರಾರ್ಥನೆ ನೆರವೇರಿತು. ಕು. ರೂಪಾ ಸ್ವಾಗತಿಸಿದರು. ಕು. ಐಶ್ವರ್ಯ ಹಾಗೂ ಕು. ಅರುಣ ಅತಿಥಿಗಳನ್ನು ಪರಿಚಯಿಸಿದರು. ಕು. ಬ್ಲೆಸನ್ ಕಾರ್ಯಕ್ರಮ ನಿರೂಪಿಸಿ, ಕು. ರೇಷ್ಮಾ ವಂದಿಸಿದರು.

ಮಾಧ್ಯಮ ಸತ್ಯದ ದಾರಿ ತೋರಲಿ

# ಪತ್ರಿಕಾ ದಿನಾಚರಣೆಯಲ್ಲಿ ಆಧ್ಯಾತ್ಮಿಕತೆ–ಪತ್ರಿಕೋದ್ಯಮದ ಸಂಗಮ



ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸತ್ಯದ ಅನ್ವೇಷಣೆ, ಸಾಮಾಜಿಕ ಜಾಗೃತಿ ಹಾಗೂ ಆತ್ಮಜ್ಞಾನದ ಸಂದೇಶವನ್ನು ಒಂದೇ ವೇದಿಕೆಯಲ್ಲಿ ಸಾರಿದ ಅರ್ಥಪೂರ್ಣ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಪಟ್ಟಣದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿದ್ಯಾಲಯದಲ್ಲಿ ಗುರುವಾರ ಸಂಜೆ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಈಶ್ವರೀಯ ವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತ್ತಕ್ಕ, ಇಂದಿನ ಮಾನವನು ಭೌತಿಕ ಸಾಧನೆಗಳ ಹಿಂದೆ ಓಡುತ್ತಾ ತನ್ನ ನಿಜವಾದ ಅಸ್ತಿತ್ವವನ್ನು ಮರೆತಿದ್ದಾನೆ. "ನಾನು ಯಾರು?" ಎಂಬ ಪ್ರಶ್ನೆಗೆ ಉತ್ತರ ಕಂಡು–ಕೊಂಡಾಗ ಮಾತ್ರ ಜೀವನದ ನಿಜವಾದ ಸಾರ್ಥಕತೆ ಅರಿವಾಗುತ್ತದೆ ಎಂದು ಹೇಳಿದರು.

ನಾವು ದೇಹವಲ್ಲ, ದೇಹವನ್ನು ನಡೆಸುವ ಚೈತನ್ಯಶಕ್ತಿಯಾದ ಆತ್ಮವಾಗಿದ್ದೇವೆ. ದೇಹ ನಶ್ವರವಾದರೂ ಆತ್ಮ ಶಾಶ್ವತವಾಗಿದೆ. ಮನಸ್ಸು, ಬುದ್ಧಿ ಹಾಗೂ ಸಂಸ್ಕಾರಗಳ ಮೂಲಕ ಆತ್ಮ ತನ್ನ ಕಾರ್ಯ ನಿರ್ವಹಿಸುತ್ತದೆ. ಪರಮಾತ್ಮನ ಸ್ಮರಣೆಯಿಂದ ಶಾಂತಿ, ಪ್ರೀತಿ, ಪವಿತ್ರತೆ, ಆನಂದ ಹಾಗೂ ಶಕ್ತಿಯಂತಹ ದೈವಿಕ ಗುಣಗಳನ್ನು ಜಾಗೃತಗೊಳಿಸಬಹುದು ಎಂದು ತಿಳಿಸಿದರು.

ಪತ್ರಕರ್ತರ ವೃತ್ತಿ ನಿರಂತರ ಒತ್ತಡ ಮತ್ತು ಜವಾಬ್ದಾರಿಯಿಂದ ಕೂಡಿದ್ದು, ಇಂತಹ ಸಂದರ್ಭದಲ್ಲಿ ಮಾನಸಿಕ ಸಮತೋಲನ ಕಾಪಾಡಿಕೊಳ್ಳಲು ಆಧ್ಯಾತ್ಮಿಕ ಮೌಲ್ಯಗಳು ಅತ್ಯಗತ್ಯ. ಸಮಾಜಕ್ಕೆ ದಿಕ್ಕು ತೋರಿಸುವ ಪತ್ರಕರ್ತರು ಶಾಂತಿ, ತಾಳ್ಮೆ ಹಾಗೂ ವಿವೇಕದಿಂದ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಗದಗ ಜಿಲ್ಲಾ ಕಾನಿಪ ಸಂಘದ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ, ಸಾಮಾಜಿಕ ಜಾಲತಾಣಗಳ ಯುಗದಲ್ಲಿ ಸುಳ್ಳು ಸುದ್ದಿಗಳ ಹರಡುವಿಕೆ ಹೆಚ್ಚಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಮುದ್ರಿತ ಮಾಧ್ಯಮಗಳು ಪರಿಶೀಲಿತ ಹಾಗೂ ವಿಶ್ವಾಸಾರ್ಹ ಮಾಹಿತಿಯನ್ನು ಜನರಿಗೆ ತಲುಪಿಸುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸುತ್ತಿವೆ ಎಂದು ಹೇಳಿದರು.

> "ಸತ್ಯ, ಶಾಂತಿ ಮತ್ತು ಆತ್ಮಜ್ಞಾನವನ್ನು ಜೀವನದ ಭಾಗವಾಗಿಸಿಕೊಂಡ ಪತ್ರಕರ್ತರೇ ಸಮಾಜಕ್ಕೆ ನಿಜವಾದ ದಾರಿದೀಪರಾಗುತ್ತಾರೆ."
> –ಬಿ.ಕೆ. ಸವಿತಕ್ಕ

ಪತ್ರಕರ್ತ ಈಶ್ವರ ಬೆಟಗೇರಿ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಆಧ್ಯಾತ್ಮಿಕ, ಧಾರ್ಮಿಕ ಹಾಗೂ ಸಾಮಾಜಿಕ ಚಿಂತನೆಗಳು ಸಮಾನವಾಗಿ ಅಗತ್ಯ. ಧ್ಯಾನ ಮತ್ತು ಆತ್ಮಜ್ಞಾನದ ಮೂಲಕ ಮನಸ್ಸಿನ ಶಾಂತಿ ಹಾಗೂ ಆತ್ಮಶುದ್ಧಿ ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಕಾನಿಪ ಸಂಘದ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ನಿಂಗರಾಜ ಬೇವಿನಕಟ್ಟಿ ಅವರ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಉತ್ತರಾಖಂಡದ ಉತ್ತರಕಾಶಿಯ ಹರ್ರಾ ಟಾಪ್ ಶಿಖರವನ್ನು ಏರಿ ಸಾಧನೆಗೈದ ಜಕ್ಕಲಿ ಗ್ರಾಮದ ಸೃಷ್ಟಿ ಮೇಟಿ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಜೊತೆಗೆ ನರೇಗಲ್ಲ ಹೋಬಳಿ ಕಾನಿಪ ಸಂಘದ ಪತ್ರಕರ್ತರಿಗೂ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಈಶ್ವರೀಯ ಪ್ರಾರ್ಥನೆ, ಪರಮಾತ್ಮನ ಸಂದೇಶ ಹಾಗೂ ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಲಾಯಿತು. ವೇದಿಕೆಯಲ್ಲಿ ಆದರ್ಶ ಕುಲಕರ್ಣಿ, ಮಲ್ಲಯ್ಯ ಗುಂಡಗೋಪರಮಠ, ಸಂಗಮೇಶ ಮೆಣಸಗಿ, ಉಮೇಶ ನವಲಗುಂದ, ಹುಚ್ಚೀರಪ್ಪ ಈಟಿ, ಶಿವು ಮಡಿವಾಳರ, ಮಂಜುನಾಥ ಬಂಡಿವಡ್ಡರ ಸೇರಿದಂತೆ ಈಶ್ವರೀಯ ಪರಿವಾರದವರು ಉಪಸ್ಥಿತರಿದ್ದರು.

# ರಾಮಮಂದಿರದ ಬೆನ್ನಲ್ಲೇ ಬದರಿನಾಥದಲ್ಲೂ ದೇಣಿಗೆ ದುರುಪಯೋಗ? ತನಿಖೆಗೆ ಆದೇಶ

ವಿಜಯಸಾಕ್ಷಿ ಸುದ್ದಿ, ಡೆಹ್ರಾಡೂನ್

ಅಯೋಧ್ಯೆಯ ರಾಮ ಮಂದಿರದ ದೇಣಿಗೆ ದುರುಪಯೋಗ ಪ್ರಕರಣದ ಬಳಿಕ ಇದೀಗ ಬದರಿನಾಥ ಧಾಮದಲ್ಲೂ ಕಾಣಿಕೆ ಹಣ ದುರುಪಯೋಗವಾಗಿದೆ ಎಂಬ ಗಂಭೀರ ಆರೋಪಗಳು ಕೇಳಿ ಬಂದಿವೆ. ಈ ಹಿನ್ನೆಲೆಯಲ್ಲಿ ತನಿಖೆಗೆ ಆದೇಶಿಸಲಾಗಿದೆ.

ಬದರಿನಾಥ–ಕೇದರನಾಥ ದೇವಸ್ಥಾನ ಸಮಿತಿ ಅಧ್ಯಕ್ಷ ಹೇಮಂತ್ ದ್ವಿವೇದಿ ಅವರು ಈ ಕುರಿತು ಮಾಹಿತಿ ನೀಡಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಆರೋಪಗಳನ್ನು ಸಮಿತಿ ಗಂಭೀರವಾಗಿ ಪರಿಗಣಿಸಿದೆ ಎಂದು ತಿಳಿಸಿದ್ದಾರೆ.

ಪ್ರಕರಣದ ಸತ್ಯಾಸತ್ಯತೆ ಪರಿಶೀಲಿಸಲು ವಿಶೇಷ ತನಿಖಾ ಸಮಿತಿಯನ್ನು ರಚಿಸಲು ಆದೇಶ ನೀಡಲಾಗಿದ್ದು, ಸಂಬಂಧಪಟ್ಟ ಸಿಬ್ಬಂದಿಗೆ ನೋಟಿಸ್ ಜಾರಿ ಮಾಡಿ ಸ್ಪಷ್ಟನೆ ನೀಡುವಂತೆ ಸೂಚಿಸಲಾಗಿದೆ.

ದೇಣಿಗೆ ದುರುಪಯೋಗದ ಆರೋಪದ ಹಿನ್ನೆಲೆ ಧಾರ್ಮಿಕ ಸಂಸ್ಥೆಗಳ ನಿರ್ವಹಣೆ ಹಾಗೂ ಹಣಕಾಸು ಪಾರದರ್ಶಕತೆ ಕುರಿತು ಮತ್ತೆ ಚರ್ಚೆ ಆರಂಭವಾಗಿದೆ.

# ವಿದ್ಯಾರ್ಥಿಗಳು ವಚನ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಆದರ್ಶ ನಾಗರಿಕರಾಗಬೇಕು: ಎಂ.ಕೆ. ಲಮಾಣಿ

## ಶರಣರ ವಚನಗಳೇ ಬದುಕಿನ ದಿಕ್ಸೂಚಿ



ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

12ನೇ ಶತಮಾನದ ಶಿವಶರಣರು ಸಮಾಜಕ್ಕೆ ದಾರಿದೀಪವಾಗುವ ಅಮೂಲ್ಯ ವಚನಗಳನ್ನು ನೀಡಿದ್ದು, ವಿದ್ಯಾರ್ಥಿಗಳು ಆ ವಚನಗಳ ತತ್ವಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಆದರ್ಶ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಕೆ. ಲಮಾಣಿ ಹೇಳಿದರು. ತಾಲೂಕಿನ ಕಡಕೋಳ ಗ್ರಾಮದ ಶ್ರೀ ಬಸವರಾಜ ಕೊಂಚಿಗೇರಿ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 'ಶರಣ–ರ ನಡೆ – ವಿದ್ಯಾರ್ಥಿಗಳ ಕಡೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿವಶರಣೆಯರಾದ ಅಕ್ಕಮಹಾದೇವಿ, ಆಯ್ದಕ್ಕಿ ಲಕ್ಕಮ್ಮ, ಸತ್ಯಕ್ಕ, ಕಲ್ಯಾಣಮ್ಮ ಸೇರಿದಂತೆ ಅನೇಕ ಶರಣರು ಮಹಿಳೆಯರ ಸ್ಥಾನಮಾನ ಹಾಗೂ ಗೌರವವನ್ನು ಎತ್ತಿ ಹಿಡಿದಿದ್ದಾರೆ. ಅವರ ವಚನಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿದ್ದು, ವಿದ್ಯಾರ್ಥಿಗಳು ಶರಣರ ತತ್ವ, ಆದರ್ಶ ಹಾಗೂ ನುಡಿಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ನಾಗರಿಕರಾಗಿ ಸಮಾಜಕ್ಕೆ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವಿದ್ಯಾರ್ಥಿಗಳು ತಂದೆ–ತಾಯಿ, ಗುರುಗಳು ಹಾಗೂ ಹಿರಿಯರನ್ನು ಗೌರವಿಸುವ ಗುಣವನ್ನು ಬೆಳೆಸಿಕೊಳ್ಳಬೇಕು. ಶರಣರ ಆದರ್ಶ ಬದುಕನ್ನು ಅನುಸರಿಸುವ ಮೂಲಕ ಮೌಲ್ಯಯುತ ಜೀವನ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯೆ ಕನಸಮ್ಮ, ಮಲ್ಲಪ್ಪ ಹರ್ತಿ, ಜ್ಯೋತಿ ಕೊಂಚಿಗೇರಿ, ಶರಣಪ್ಪ ಕಲಗುಡಿ, ರಮೇಶ್ ಪೂಜಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಣ್ಣಿನ ಸೊಗಡು, ಕುಟುಂಬದ ಬಾಂಧವ್ಯ, ಮಾನವೀಯ ಮೌಲ್ಯಗಳ ಮನಮುಟ್ಟುವ ನಿರೂಪಣೆ

# ಕಣ್ಣೀರು ತರಿಸಿದ 'ಕಾಲಘಟ್ಟ...

ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಭಾವನಾತ್ಮಕ ಕಥೆಗಳ ಮೂಲಕ ಕನ್ನಡ ಚಿತ್ರರಂಗದಲ್ಲಿ ತಮ್ಮದೇ ಛಾಪು ಮೂಡಿಸಿದ್ದ ಎಸ್. ಮಹೇಂದರ್ ಹಾಗೂ ಜೋಗಿ ಪ್ರೇಮ್ ಅವರ ಸಾಲಿಗೆ ನಿರ್ದೇಶಕ ಕೆ. ಪ್ರಕಾಶ್ ಅಂಬಳೆ ಹೊಸ ಭರವಸೆಯಾಗಿ ಹೊರಹೊಮ್ಮಿದ್ದಾರೆ ಎಂಬ ಮಾತು ಪ್ರೇಕ್ಷಕರ ವಲಯದಲ್ಲಿ ಕೇಳಿಬರುತ್ತಿದೆ.

ನಿರ್ಮಾಪಕ ಲಯನ್ ಚಿಕ್ಕೇಗೌಡ ಟಿ.ಸಿ. ತಳದವಾದಿ ಅವರ ನಿರ್ಮಾಣದ 'ಕಾಲಘಟ್ಟ' ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ಪಡೆಯುತ್ತಿದೆ. ಜನಪದ ಸೊಗಡು, ಮಣ್ಣಿನ ಪರಿಮಳ, ಕುಟುಂಬದ ಬಾಂಧವ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಆಧರಿಸಿದ ಕಥಾಹಂದರ ಪ್ರೇಕ್ಷಕರ ಮನಸ್ಸಿಗೆ ತಟ್ಟಿದ್ದು, ವಿಶೇಷವಾಗಿ ಚಿತ್ರದ ಭಾವನಾತ್ಮಕ ದೃಶ್ಯಗಳು ಹಾಗೂ ಕ್ಲೈಮ್ಯಾಕ್ಸ್ ಅನೇಕ ಪ್ರೇಕ್ಷಕರನ್ನು ಭಾವುಕರನ್ನಾಗಿಸುತ್ತಿವೆ.

ನಂಜನಗೂಡು ತಾಲೂಕಿನ ಅಂಬಳೆ ಗ್ರಾಮದ ಪ್ರತಿಭೆ ಕೆ. ಪ್ರಕಾಶ್ ಅಂಬಳೆ, ಕನ್ನಡ ಮಣ್ಣಿನ ಕಥೆಯನ್ನು ವಾಣಿಜ್ಯ ಅಂಶಗಳೊಂದಿಗೆ ಸಮತೋಲನವಾಗಿ ತೆರೆಗೆ ತಂದಿರುವುದು ಚಿತ್ರದ ವಿಶೇಷತೆ ಎನ್ನಲಾಗುತ್ತಿದೆ. ಸಂಸ್ಕೃತಿ, ಪರಂಪರೆ ಹಾಗೂ ಕುಟುಂಬದ ಮೌಲ್ಯಗಳನ್ನು ಕಥೆಯಲ್ಲಿ ಅಚ್ಚುಕಟ್ಟಾಗಿ ಹೆಣೆದಿರುವುದಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

ಚಿತ್ರದ ನಿರ್ಮಾಪಕ ಲಯನ್ ಚಿಕ್ಕೇಗೌಡ ಟಿ.ಸಿ. ತಳದವಾದಿ, ಕಥೆ–ಯ ಗುಣಮಟ್ಟಕ್ಕೆ ಯಾವುದೇ ರಾಜಿ ಮಾಡಿಕೊಳ್ಳದೆ ಚಿತ್ರ ನಿರ್ಮಾಣಕ್ಕೆ ಬೆಂಬಲ ನೀಡಿದ್ದು, ಚಿತ್ರದ ಯಶಸ್ಸಿನಲ್ಲಿ ಅವರ ಪಾತ್ರವೂ ಮಹತ್ವದ್ದಾಗಿದೆ. ಕಲಾವಿದರು ಹಾಗೂ ತಂತ್ರಜ್ಞರ ಸಮರ್ಪಕ ಕೆಲಸವೂ ಚಿತ್ರದ ಬಲವಾಗಿ ಪರಿಣಮಿಸಿದೆ.

ಕುಟುಂಬ ಸಮೇತ ವೀಕ್ಷಿಸಬಹುದಾದ ಭಾವನಾತ್ಮಕ ಚಿತ್ರವಾಗಿ 'ಕಾಲಘಟ್ಟ' ಹೊರಹೊಮ್ಮಿದ್ದು, ಪ್ರೇಕ್ಷಕರ ಜೊತೆಗೆ ಚಿತ್ರರಂಗದ ವಲಯ ಹಾಗೂ ಮಾಧ್ಯಮಗಳಿಂದಲೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಗುರುಕೃಪೆಯಿಂದ ಇಷ್ಟಾರ್ಥ ಸಿದ್ಧಿ: ಕರಿವೃಷಭೇಂದ್ರ ಶ್ರೀ



**ವಿಜಯಸಾಕ್ಷಿ ಸುದ್ದಿ, ಗುತ್ತಲ**

ಸದ್ಗುರುವಿನ ಕೃಪೆ ಮತ್ತು ಮಾರ್ಗದರ್ಶನದಿಂದ ಜೀವನದಲ್ಲಿ ಸಕಲ ಇಷ್ಟಾರ್ಥಗಳು ಸಿದ್ಧಿಯಾಗುತ್ತವೆ ಎಂದು ನೋಣವಿನಕೆರೆ ಕಾಡಸಿದ್ಧೇಶ್ವರ ಮಠದ ಪೂಜ್ಯ ಡಾ. ಕರಿವೃಷಭೇಂದ್ರ ರಾಜದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಹೇಳಿದರು.

ಸಮೀಪದ ಮಣ್ಣೂರ ಗ್ರಾಮದ ನೆಗಳೂರ ಸಂಸ್ಥಾನ ಹಿರೇಮಠದ ಶಾಖೆಯಾದ ಗದಿಗೇಶ್ವರ▯ವಿರುಪಾಕ್ಷೇಶ್ವರ ತಪೋವನಮಠದಲ್ಲಿ ಗುರುವಾರ ನಡೆದ ನೂತನ ಧರ್ಮ ನಿವಾಸ ಲೋಕಾರ್ಪಣೆ ಹಾಗೂ ಧರ್ಮ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಅವರು, ಗುರುವಿನ ಮಾರ್ಗದಲ್ಲಿ ನಡೆದ ಬದುಕು ಪಾವನವಾಗುತ್ತದೆ ಎಂದು ಹೇಳಿದರು.

ಅಮ್ಮಿನಭಾವಿ ಪಂಚಗ್ರಹ ಹಿರೇಮಠದ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ, ನೆಗಳೂರಿನ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ಹಲವು ಗಣ್ಯರು ಮಾತನಾಡಿದರು. ಧರ್ಮ ನಿವಾಸ ನಿರ್ಮಾಣಕ್ಕೆ ಸೇವೆ ಸಲ್ಲಿಸಿದ ಭಕ್ತರನ್ನು ಸನ್ಮಾನಿಸಲಾಯಿತು.

ಮಣ್ಣೂರ, ನೆಗಳೂರ, ಗುತ್ತಲ ಸೇರಿದಂತೆ ವಿವಿಧ ಗ್ರಾಮಗಳಿಂದ ಸಾವಿರಾರು ಭಕ್ತರು ಭಾಗವಹಿಸಿದ್ದರು. ಬಳಿಕ ಅನ್ನಸಂತರ್ಪಣೆ ನಡೆಯಿತು.

### ನರಗುಂದದಲ್ಲಿ ಸ್ವೀಪ್ ಸಮಿತಿಯಿಂದ ಬೃಹತ್ ಜಾಗೃತಿ ಅಭಿಯಾನ

# ಮತದಾರರ ಜಾಗೃತಿಗೆ ಬೈಕ್ ರ್ಯಾಲಿ ಸದ್ದು



> "ನಿಖರ ಮತದಾರರ ಪಟ್ಟಿಯೇ ಪ್ರಜಾಪ್ರಭುತ್ವದ ಭದ್ರ ಅಡಿಪಾಯ. ಪ್ರತಿಯೊಬ್ಬ ಅರ್ಹ ನಾಗರಿಕರು ಬಿಎಲ್‌ಒಗಳಿಗೆ ಅಗತ್ಯ ಮಾಹಿತಿ ನೀಡಿ ಮತದಾರರ ಪಟ್ಟಿಯ ಪರಿಷ್ಕರಣೆಗೆ ಸಹಕರಿಸಬೇಕು."
> **–ಶ್ರೀಧರ್ ಚಿನಗುಂಡಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ ನರಗುಂದ**

**ವಿಜಯಸಾಕ್ಷಿ ಸುದ್ದಿ, ನರಗುಂದ**

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್–2026) ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ತಾಲೂಕು ಪಂಚಾಯಿತಿ, ತಾಲೂಕು ಆಡಳಿತ, ಪುರಸಭೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಶುಕ್ರವಾರ ನರಗುಂದ ನಗರದಲ್ಲಿ ಬೃಹತ್ ಬೈಕ್ ರ್ಯಾಲಿ ಹಾಗೂ ಮಾನವ ಸರಪಳಿ ಕಾರ್ಯಕ್ರಮ ನಡೆಯಿತು.

ನಗರದ ಉಡುಚಾ ಪರಮೇಶ್ವರಿ ದೇವಸ್ಥಾನದಿಂದ ಆರಂಭವಾದ ಬೈಕ್ ರ್ಯಾಲಿಯು ದಂಡಾಪೂರ ರಸ್ತೆ, ಮುಖ್ಯ ಮಾರುಕಟ್ಟೆ ರಸ್ತೆ, ಗಾಂಧಿ ಚೌಕ್ ಹಾಗೂ ಬಸವೇಶ್ವರ ಸರ್ಕಲ್ ಮೂಲಕ ಸಂಚರಿಸಿ, ವಿಜಯಪುರ–ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿಯ ಶಿವಾಜಿ ಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಸಮಾರೋಪಗೊಂಡಿತು. ಈ ವೇಳೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಘೋಷಣೆಗಳನ್ನು ಕೂಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ, ಜೂನ್ 30ರಿಂದ ಜುಲೈ 29ರವರೆಗೆ ನಡೆಯುತ್ತಿರುವ ವಿಶೇಷ ಸಮಗ್ರ ಪರಿಷ್ಕರಣೆ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಸಾರ್ವಜನಿಕರು ಅಗತ್ಯ ದಾಖಲೆಗಳು ಹಾಗೂ ನಿಖರ ಮಾಹಿತಿಯನ್ನು ನೀಡಿ ಸಹಕರಿಸಬೇಕು. ಅಗತ್ಯ ನಮೂನೆಗಳನ್ನು ಭರ್ತಿ ಮಾಡಿ ಸ್ವೀಕೃತಿ ಪಡೆಯುವುದು ಕಡ್ಡಾಯ ಎಂದು ತಿಳಿಸಿದರು. ಪುರಸಭೆ ಮುಖ್ಯಾಧಿಕಾರಿ ಸುಭಾಷ್ ಕುದಾನಪುರ ಮಾತನಾಡಿ, ಸ್ವೀಪ್ ಸಮಿತಿ ವತಿಯಿಂದ ಶಾಲಾ–ಕಾಲೇಜುಗಳು, ಗ್ರಾಮೀಣ ಪ್ರದೇಶಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅರ್ಹ ನಾಗರಿಕರೆಲ್ಲರೂ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವಂತೆ ವಿವಿಧ ಮಾಧ್ಯಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಸಂತೋಷಕುಮಾರ ಪಾಟೀಲ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕಿ ಕೃಷ್ಣಮ್ಮ ಹಾದಿಮನಿ, ಹಿರಿಯ ಆರೋಗ್ಯ ನಿರೀಕ್ಷಕ ಸಂಗಮೇಶ ಬ್ಯಾಳಿ, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಹಿರೇಮಠ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸ್ವೀಪ್ ಸಮಿತಿ ಸದಸ್ಯರು ಭಾಗವಹಿಸಿದ್ದರು.

ಮೊದಲನೆಯ ಪುಟದಿಂದ ಬಂದದ್ದು

### ವೀರೇಶ್ವರ ಪುಣ್ಯಾಶ್ರಮ ಜಾತಿ.....

ಆಶ್ರಮದಲ್ಲಿ ಕಲಾವಿದರು, ಸಂಗೀತಗಾರರು, ಪ್ರವಚನಕಾರರು ಹಾಗೂ ಸಾಹಿತ್ಯ ಸೇವಕರನ್ನು ರೂಪಿಸುವುದೇ ಮುಖ್ಯ ಉದ್ದೇಶವಾಗಿದ್ದು, ಇಲ್ಲಿ ಯಾವುದೇ ರೀತಿಯ ರಾಜಕೀಯ ಅಥವಾ ಜಾತಿ ಪ್ರಭಾವಕ್ಕೆ ಅವಕಾಶ ಇರಬಾರದು ಎಂದು ಹೇಳಿದರು. ಆಶ್ರಮದ ರಕ್ಷಣೆಗೆ ಎಲ್ಲರೂ ಒಂದಾಗಬೇಕು. ಇಲ್ಲಿ ವ್ಯಕ್ತಿಗಳಿಗಿಂತ ವ್ಯವಸ್ಥೆ, ಪರಂಪರೆ ಮತ್ತು ಮೌಲ್ಯಗಳು ಮುಖ್ಯ. ಕಾಲ ಬದಲಾದರೂ ಆಶ್ರಮದ ಮೂಲ ಸ್ವರೂಪ ಬದಲಾಗಬಾರದು. ಮಾಧ್ಯಮಗಳ ಮುಂದೆ ಅನಗತ್ಯ ಹೇಳಿಕೆಗಳನ್ನು ನೀಡುವುದನ್ನು ತಪ್ಪಿಸಿ, ತಾಳ್ಮೆಯಿಂದ ನಡೆದುಕೊಳ್ಳುವುದು ಒಳಿತು ಎಂದು ಅವರು ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದುಗಿನ ಶಿವಾನಂದ ಬ್ರಹ್ಮಮಠದ ಜಗದ್ಗುರು ಅಭಿನವ ಶಿವಾನಂದ ಮಹಾಸ್ವಾಮಿಗಳು ವಹಿಸಿದ್ದರು. ಯಲಬುರ್ಗಾದ ಬಸವಲಿಂಗೇಶ್ವರ ಶಿವಾಚಾರ್ಯರು, ಗುಳೇದಗುಡ್ಡದ ಅಭಿನವ ಒಪ್ಪತ್ತೇಶ್ವರ ಮಹಾಸ್ವಾಮಿಗಳು, ಅಡ್ನೂರಿನ ಅಭಿನವ ಪಂಚಾಕ್ಷರ ಶಿವಾಚಾರ್ಯರು, ಅರಳಿಹಳ್ಳಿಯ ಗವಿಸಿದ್ದೇಶ್ವರ ತಾತನವರು, ಜಿಗೇರಿಯ ಗುರುಸಿದ್ದೇಶ್ವರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಈ ಸಂದರ್ಭದಲ್ಲಿ ಅರಳಹಳ್ಳಿ ಬೃಹನ್ಮಠದ ಶರಣಬಸವಯ್ಯ ತಾತನವರ 'ಲೀಲಾಮೃತ ಪುರಾಣ' ಹಾಗೂ 'ವಿಶ್ವಯೋಗಿ ವೇಮ ಮತ್ತು ಮಹಾಸಾಧ್ವಿ ಬದುಕು–ಚಿಂತನೆ' ಗ್ರಂಥಗಳನ್ನು ಜಗದ್ಗುರುಗಳ ಸಾನ್ನಿಧ್ಯದಲ್ಲಿ ಲೋಕಾರ್ಪಣೆ ಮಾಡಲಾಯಿತು. ಬಳಿಕ ಪಂ. ಪಂಚಾಕ್ಷರಿ ಗವಾಯಿಗಳ ನಾಟ್ಯ ಸಂಘದ ಕಲಾವಿದರು 'ಬಂಜೆ ತೊಟ್ಟಿಲು' ಸಾಮಾಜಿಕ ನಾಟಕ ಪ್ರದರ್ಶಿಸಿದರು.

# ಬರಗಾಲ ಪರಿಸ್ಥಿತಿ ಎದುರಿಸಲು ಸಜ್ಜಾಗುವಂತೆ ಸೂಚನೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನೈರುತ್ಯ ಮಾನ್ಸೂನ್ ಆರಂಭವಾದ ನಂತರದ ಮೊದಲ ತಿಂಗಳಲ್ಲಿ ಕರ್ನಾಟಕವು ಶೇ. 41 ರಷ್ಟು ಮಳೆ ಕೊರತೆಯನ್ನು ದಾಖಲಿಸಿರುವುದರಿಂದ, ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮತ್ತು ಹವಾಮಾನ ತಜ್ಞರು ಇದನ್ನು ವಿಫಲ ಮಾನ್ಸೂನ್ ಅವಧಿ ಎಂದು ಕರೆದಿದ್ದಾರೆ.

### ವಿದ್ಯಾರ್ಥಿಗಳಲ್ಲಿ ಉನ್ನತ ಗುರಿ, ಆತ್ಮವಿಶ್ವಾಸ ಮತ್ತು ಸಂಸ್ಕಾರ ಬೆಳೆಸುವಂತೆ ಶಿಕ್ಷಣ ತಜ್ಞರ ಕರೆ

# ಗುರಿ ದೊಡ್ಡದಿದ್ದರೆ ಗೆಲುವು ದೂರವಲ್ಲ!



**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ವಿದ್ಯಾರ್ಥಿಗಳು ಜೀವನದಲ್ಲಿ ದೊಡ್ಡ ಗುರಿ ಮತ್ತು ಸಾಧನೆಯ ಹಂಬಲ ಹೊಂದಿದಾಗ ಮಾತ್ರ ಯಶಸ್ಸಿನ ಶಿಖರ ತಲುಪಲು ಸಾಧ್ಯ. ವಿದ್ಯೆಯ ಜೊತೆಗೆ ಸಂಸ್ಕಾರ, ಸಂಸ್ಕೃತಿ ಹಾಗೂ ಶಿಸ್ತು ಅಳವಡಿಸಿಕೊಂಡರೆ ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದು ಅನ್ನದಾನೇಶ್ವರ ಪಿಯು ಕಾಲೇಜಿನ ಅಧ್ಯಕ್ಷ ವೀರಯ್ಯ ವಿ. ವಸ್ತ್ರದ ಹೇಳಿದರು.

ನಗರದ ಪುರ್ತಗೇರಿ ಕ್ರಾಸ್‌ನಲ್ಲಿರುವ ಶ್ರೀ ಅನ್ನದಾನೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಶುಕ್ರವಾರ ಆಯೋಜಿಸಿದ್ದ 'ವಿರಾಟ್–2026' ಕಾರ್ಯಕ್ರಮದಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಹಾಗೂ ವಿವಿಧ ಸಾಂಘಿಕ ಚಟುವಟಿಕೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಒಮ್ಮೆ ಗುರಿ ನಿಗದಿಪಡಿಸಿದ ಬಳಿಕ ಅದನ್ನು ಸಾಧಿಸುವವರೆಗೆ ಹಿಂದೆ ಸರಿಯಬಾರದು. ಗುರುಗಳ ಮಾರ್ಗದರ್ಶನದಲ್ಲಿ ಅಧ್ಯಯನಶೀಲತೆಯನ್ನು ಬೆಳೆಸಿಕೊಂಡರೆ ಉನ್ನತ ಸಾಧನೆ ಸಾಧ್ಯ ಎಂದು ತಿಳಿಸಿದರು.

ಮುಖ್ಯ ಉಪನ್ಯಾಸ ನೀಡಿದ ಗಜೇಂದ್ರಗಡ ಸರ್ಕಾರಿ ಪದವಿ ಕಾಲೇಜಿನ ಪ್ರಾಚಾರ್ಯ ಬಸವಂತಪ್ಪ ಹೊಸಳ್ಳಿ, ವಿದ್ಯಾರ್ಥಿಗಳು ದೊಡ್ಡ ಕನಸು ಕಾಣಬೇಕು. ಪರಿಶ್ರಮ, ಆತ್ಮವಿಶ್ವಾಸ ಮತ್ತು ಜವಾಬ್ದಾರಿಯುತ ಮನೋಭಾವವೇ ಯಶಸ್ಸಿನ ಮೂಲ ಎಂದು ಹೇಳಿದರು.

ನರೇಗಲ್ ಅನ್ನದಾನೇಶ್ವರ ಪದವಿ ಕಾಲೇಜಿನ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಮಾತನಾಡಿ, ಸ್ಪಷ್ಟ ಗುರಿ ಹಾಗೂ ಕಠಿಣ ಪರಿಶ್ರಮದಿಂದ ವಿದ್ಯಾರ್ಥಿಗಳು ತಮ್ಮ ಸಂಪೂರ್ಣ ಸಾಮರ್ಥ್ಯವನ್ನು ಅನಾವರಣಗೊಳಿಸಬಹುದು ಎಂದರು.

ಶೈಕ್ಷಣಿಕ ಸಲಹೆಗಾರ ಬಿ.ಎಸ್. ಗೌಡರ ಮಾತನಾಡಿ, ಉತ್ತಮ ಅಂಕಗಳ ಜೊತೆಗೆ ಸಂಸ್ಕಾರ, ಸಂಸ್ಕೃತಿ ಮತ್ತು ಮೌಲ್ಯಗಳನ್ನು ಅಳವಡಿಸಿಕೊಂಡಾಗ ಮಾತ್ರ ವಿದ್ಯಾರ್ಥಿಗಳು ಆದರ್ಶ ನಾಗರಿಕರಾಗಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯ ವಸಂತರಾವ್ ಗಾರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಸರ್ಕಾರಿ ಪದವಿ ಕಾಲೇಜಿನ ಪ್ರಾಚಾರ್ಯ ಬಸವಂತಪ್ಪ ಹೊಸಳ್ಳಿ, ಎಸ್.ಜಿ. ಕೇಶಣ್ಣವರ ಹಾಗೂ ದ್ವಿತೀಯ ಪಿಯು ಕಂಪ್ಯೂಟರ್ ಸೈನ್ಸ್ ವಿಷಯದಲ್ಲಿ ಶೇ.100 ಫಲಿತಾಂಶ ದಾಖಲಿಸಿದ ಉಪನ್ಯಾಸಕ ಚಂದ್ರು ಎಂ. ರಾಥೋಡ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿ ಸದಸ್ಯರಾದ ಮುದಕಪ್ಪ ತೊಂಡಿಹಾಳ, ಶಿವಾನಂದ ಮಠದ, ಎಂ.ಪಿ. ಪಾಟೀಲ, ಎಂ.ಜಿ. ಸೋಮನಕಟ್ಟಿ, ಪಿ.ಎನ್. ಚವಡಿ ಸೇರಿದಂತೆ ಬೋಧಕ–ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> "ವಿದ್ಯಾರ್ಥಿಗಳು ದೊಡ್ಡ ಕನಸು ಕಾಣಬೇಕು. ವಿದ್ಯೆಯೊಂದಿಗೆ ಸಂಸ್ಕಾರ, ಶಿಸ್ತು ಮತ್ತು ಪರಿಶ್ರಮ ಅಳವಡಿಸಿಕೊಂಡಾಗ ಮಾತ್ರ ಜೀವನದಲ್ಲಿ ಉನ್ನತ ಸಾಧನೆ ಸಾಧ್ಯ."
> **–ವೀರಯ್ಯ ವಿ. ವಸ್ತ್ರದ, ಅಧ್ಯಕ್ಷರು, ಅನ್ನದಾನೇಶ್ವರ ಪಿಯು ಕಾಲೇಜು**

### ಕಾಂಗ್ರೆಸ್ ನಡೆ ಮತ ರಕ್ಷಣೆಯ ಕಡೆ

# ಎಸ್‌ಐಆರ್ ವಿಶೇಷ ಪರಿಷ್ಕರಣೆ ಕಾರ್ಯಾಗಾರದಲ್ಲಿ ಭೀಮಾನಾಯಕ್

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**



> "ಯಾವುದೇ ಅರ್ಹ ಮತದಾರರ ಹೆಸರು ಮತದಾರರ ಪಟ್ಟಿಯಿಂದ ಕೈ ತಪ್ಪದಂತೆ ಪಕ್ಷಾತೀತವಾಗಿ ನಿಗಾ ವಹಿಸಬೇಕು. ಮತದಾನದ ಹಕ್ಕು ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ."
> **–ಭೀಮಾನಾಯಕ್, ಮಾಜಿ ಶಾಸಕ**

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್–2026) ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರ ಹೆಸರು ಕೈ ತಪ್ಪದಂತೆ ಕಾರ್ಯಕರ್ತರು ಎಚ್ಚರಿಕೆಯಿಂದ ಕೆಲಸ ನಿರ್ವಹಿಸಬೇಕು ಎಂದು ಮಾಜಿ ಶಾಸಕ ಭೀಮಾನಾಯಕ್ ಕರೆ ನೀಡಿದರು.

ಪಟ್ಟಣದ ಅಶೋಕ ಫಾರ್ಮ್ ಹೌಸ್‌ನಲ್ಲಿ ಆಯೋಜಿಸಿದ್ದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆ ವಿಷಯ ದೇಶಾದ್ಯಂತ ಚರ್ಚೆಯಾಗುತ್ತಿದ್ದು, ಪ್ರತಿಯೊಬ್ಬರೂ ಇದರ ಬಗ್ಗೆ ಆಸಕ್ತಿ ವಹಿಸಬೇಕು ಎಂದು ಹೇಳಿದರು.

ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಸಾವಿರಾರು ಮತದಾರರ ಹೆಸರುಗಳು ಪಟ್ಟಿಯಿಂದ ಕೈ ತಪ್ಪಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ದೇಶದ ಪ್ರತಿಯೊಬ್ಬ ಮತದಾರರು ಜಾಗೃತರಾಗಿರಬೇಕು ಎಂದರು. ವಿಶೇಷವಾಗಿ ಅಲ್ಪಸಂಖ್ಯಾತರು ಹಾಗೂ ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಜನರ ಮತಗಳ ಬಗ್ಗೆ ಹೆಚ್ಚಿನ ನಿಗಾ ವಹಿಸುವ ಅಗತ್ಯವಿದೆ ಎಂದು ತಿಳಿಸಿದರು.

ವಿಧಾನಸಭಾ ಕ್ಷೇತ್ರದಲ್ಲಿ ಬಿಎಲ್‌ಎ–1 ಹಾಗೂ ಬಿಎಲ್‌ಎ–2ಗಳನ್ನು ನೇಮಕ ಮಾಡಲಾಗಿದ್ದು, ಅವರಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗುವುದು. ಪ್ರತಿಯೊಂದು ಬೂತ್ ವ್ಯಾಪ್ತಿಯ ಕಾರ್ಯಕರ್ತರು ಗ್ರಾಮ ಮಟ್ಟದಲ್ಲಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಎಸ್‌ಐಆರ್ ಕುರಿತು ಟಂಟಂ ಮೂಲಕ ಜಾಗೃತಿ ಮೂಡಿಸಬೇಕು, ಗ್ರಾಮಗಳಲ್ಲಿ ಫ್ಲೆಕ್ಸ್ ಅಳವಡಿಸಬೇಕು ಹಾಗೂ ಮತದಾರರ ಪಟ್ಟಿಯ ಪ್ರತಿಯನ್ನು ಪಡೆದು ಸಂರಕ್ಷಿಸಿಕೊಳ್ಳಬೇಕು ಎಂದು ಸೂಚಿಸಿದರು.

ಚುನಾವಣೆಯ ವೇಳೆ ಮತದಾರರ ಹೆಸರು ಪಟ್ಟಿಯಲ್ಲಿ ಕಾಣಿಸದಿದ್ದರೆ, ಅದರ ವಿರುದ್ಧ ಕಾನೂನು ಹೋರಾಟ ನಡೆಸಲು ಈ ದಾಖಲೆಗಳು ಸಹಕಾರಿಯಾಗಲಿವೆ. ಆದ್ದರಿಂದ ಕೇವಲ ಕಾಂಗ್ರೆಸ್ ಪಕ್ಷದ ಮತದಾರರಷ್ಟೇ ಅಲ್ಲ, ಎಲ್ಲ ಪಕ್ಷಗಳ ಅರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ಕೈ ತಪ್ಪದಂತೆ ಕಾರ್ಯಕರ್ತರು ಪಕ್ಷಾತೀತವಾಗಿ ಕೆಲಸ ಮಾಡಬೇಕು ಎಂದು ಭೀಮಾನಾಯಕ್ ಕರೆ ನೀಡಿದರು.

ಇದಕ್ಕೂ ಮುನ್ನ ಎಸ್‌ಐಆರ್ ಕುರಿತು ಡಿಜಿಟಲ್ ಪ್ರಾತ್ಯಕ್ಷಿಕೆಯನ್ನು ಪ್ರದರ್ಶಿಸಲಾಯಿತು. ಬಳಿಕ ಬಿಎಲ್‌ಎ ಕಾರ್ಯಕರ್ತರಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕುರಿಶಿವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ಅಕ್ಕಿ ತೋಟೇಶ, ಪತ್ರೇಶ್ ಹಿರೇಮಠ, ಲ್ಯಾಂಡ್ ಆರ್ಮಿ ದೇವೇಂದ್ರ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ. ಸಾಹಿರಾಬಾನು, ಉಪಾಧ್ಯಕ್ಷೆ ಯಶೋಧ ಮಂಜುನಾಥ, ಹಾಲ್ದಾಳ್ ವಿಜಯಕುಮಾರ್, ಗುಂಡ್ರ ಹನುಮಂತಪ್ಪ, ಎಂ. ಮರಿ ರಾಮಪ್ಪ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗುರುಬಸವರಾಜ ಸೊನ್ನದ, ಜಿಲ್ಲಾ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಜಂದಿಸಾಬ್ ಸೇರಿದಂತೆ ಕ್ಷೇತ್ರದ ವಿವಿಧ ಭಾಗಗಳಿಂದ ಆಗಮಿಸಿದ್ದ 500ಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

# ಹರಿಜಾತ್ರೆ ಸಿದ್ಧತೆಗೆ ಇಂದು ಮಹತ್ವದ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ನಗರದ ಗ್ರಾಮದೇವತೆಗಳಾದ ದ್ಯಾಮಮ್ಮ ಹಾಗೂ ದುರ್ಗಮ್ಮ ಹರಿಜಾತ್ರೆ ಸಿದ್ಧತೆ ಹಿನ್ನೆಲೆಯಲ್ಲಿ ವಿವಿಧ ಸಮಿತಿಗಳ ರಚನೆ ಕುರಿತು ಮಹತ್ವದ ಸಭೆಯನ್ನು ಜುಲೈ 4ರಂದು (ಶನಿವಾರ) ಸಂಜೆ 4.30ಕ್ಕೆ ನಗರದ ಒಕ್ಕಲಗೇರಿ ಓಣಿಯ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ. ಪ್ರತಿ 12 ವರ್ಷಗಳಿಗೊಮ್ಮೆ ನಡೆಯುವ ಐತಿಹಾಸಿಕ ಹರಿಜಾತ್ರೆಯ ಅಂಗವಾಗಿ ಆಗಸ್ಟ್ ತಿಂಗಳಲ್ಲಿ ನಡೆಯಲಿರುವ ಧಾರ್ಮಿಕ ಕಾರ್ಯಕ್ರಮಗಳ ಯಶಸ್ವಿ ಆಯೋಜನೆಗಾಗಿ ವಿವಿಧ ಸಮಿತಿಗಳ ಪದಾಧಿಕಾರಿಗಳನ್ನು ಈ ಸಭೆಯಲ್ಲಿ ಆಯ್ಕೆ ಮಾಡಲಾಗುವುದು. ಜಾತ್ರೆಯ ಸಿದ್ಧತೆ, ಸಂಘಟನೆ ಹಾಗೂ ಕಾರ್ಯಕ್ರಮಗಳ ರೂಪುರೇಷೆಗಳ ಕುರಿತು ಚರ್ಚೆ ನಡೆಯಲಿದೆ.

ಗದಗ–ಬೆಟಗೇರಿ ನಗರದ ಎಲ್ಲ ಭಕ್ತರು, ಸಾರ್ವಜನಿಕರು ಹಾಗೂ ಮುಖಂಡರು ಸಭೆಯಲ್ಲಿ ಭಾಗವಹಿಸಿ ತಮ್ಮ ಸಲಹೆ–ಸೂಚನೆಗಳನ್ನು ನೀಡುವ ಮೂಲಕ ಜಾತ್ರೆಯ ಯಶಸ್ಸಿಗೆ ಸಹಕರಿಸಬೇಕು ಎಂದು ಟ್ರಸ್ಟ್ ಸಮಿತಿಯ ಕೊಟ್ರಪ್ಪ ಕಮತರ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಕರ್ತವ್ಯಕ್ಕೆ ಗೌರವದ ವಿದಾಯ; ಸಹಾಯಕ ನಿರ್ದೇಶಕ ಎಸ್.ಎಚ್. ಬಾದನಟ್ಟಿಗೆ ಭಾವಪೂರ್ಣ ಬೀಳ್ಕೊಡುಗೆ

**ವಿಜಯಸಾಕ್ಷಿ ಸುದ್ದಿ, ಗದಗ**



> "ಸರ್ಕಾರಿ ಸೇವೆಯಲ್ಲಿ ಪ್ರಾಮಾಣಿಕತೆ, ಸಹನೆ ಮತ್ತು ಸಾರ್ವಜನಿಕರ ಬಗ್ಗೆ ಸ್ಪಂದಿಸುವ ಮನೋಭಾವವೇ ನೌಕರನ ನಿಜವಾದ ಆಸ್ತಿ. ಎಸ್.ಎಚ್. ಬಾದನಟ್ಟಿಯವರ ಸೇವೆ ಎಲ್ಲರಿಗೂ ಮಾದರಿಯಾಗಿದೆ."
> **–ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ**

ಜಿಲ್ಲಾ ಖಜಾನೆ ಇಲಾಖೆಯಲ್ಲಿ ಸಹಾಯಕ ನಿರ್ದೇಶಕರಾಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಎಸ್.ಎಚ್. ಬಾದನಟ್ಟಿ ಅವರಿಗೆ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಖಜಾನೆ ಇಲಾಖೆ, ಜಿಲ್ಲಾ ಖಜಾನೆ ಇಲಾಖೆ ನೌಕರರ ಸಂಘ ಹಾಗೂ ಉಪಖಜಾನೆಗಳ ವತಿಯಿಂದ ಆತ್ಮೀಯ ಅಭಿನಂದನಾ ಹಾಗೂ ಬೀಳ್ಕೊಡುಗೆ ಸಮಾರಂಭ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಸರ್ಕಾರಿ ನೌಕರರು ಸಾರ್ವಜನಿಕರ ಸಮಸ್ಯೆಗಳಿಗೆ ಸೌಜನ್ಯ ಹಾಗೂ ಸಹನೆಯಿಂದ ಸ್ಪಂದಿಸಬೇಕು. ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮಹತ್ತರ ಜವಾಬ್ದಾರಿ ಸರ್ಕಾರಿ ನೌಕರರ ಮೇಲಿದೆ. ಎಸ್. ಎಚ್. ಬಾದನಟ್ಟಿಯವರು ಶಾಂತ ಸ್ವಭಾವ, ಪ್ರಾಮಾಣಿಕತೆ ಹಾಗೂ ಜನಸ್ನೇಹಿ ಗುಣಗಳಿಂದ ಎಲ್ಲರಿಗೂ ಮಾದರಿಯಾಗಿದ್ದಾರೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಮಾತನಾಡಿ, ಬಾದನಟ್ಟಿಯವರ ಸಮಯಪ್ರಜ್ಞೆ, ಕರ್ತವ್ಯನಿಷ್ಠೆ ಹಾಗೂ ಸಕಾರಾತ್ಮಕ ಮನೋಭಾವವನ್ನು ಶ್ಲಾಘಿಸಿ, ಅವರ ನಿವೃತ್ತಿ ಜೀವನ ಸುಖ–ಶಾಂತಿಯುತವಾಗಿರಲಿ ಎಂದು ಹಾರೈಸಿದರು.

ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಎಸ್.ಜಿ. ಪಲ್ಲೇದ ಮಾತನಾಡಿ, ಸರ್ಕಾರಿ ಸೇವೆಯಿಂದ ನಿವೃತ್ತರಾದರೂ ಸಮಾಜಸೇವೆಯ ಪ್ರವೃತ್ತಿ ಮುಂದುವರಿಯಬೇಕು. ಬಾದನಟ್ಟಿಯವರ ಪ್ರಾಮಾಣಿಕತೆ ಮತ್ತು ಕರ್ತವ್ಯತತ್ಪರತೆ ಸದಾ ಸ್ಮರಣೀಯವಾಗಿರುತ್ತದೆ ಎಂದರು.

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಜಿಲ್ಲಾಧ್ಯಕ್ಷ ಪ್ರೇಮನಾಥ ಗರಗ ಹಾಗೂ ಜಿಲ್ಲಾ ಖಜಾನೆ ಉಪನಿರ್ದೇಶಕ ವಿ. ಹರಿನಾಥ ಬಾಬು ಅವರು ಬಾದನಟ್ಟಿಯವರ ಸೇವಾ ಮನೋಭಾವ, ಸಮಯಪ್ರಜ್ಞೆ ಹಾಗೂ ಸಹೋದ್ಯೋಗಿಗಳಿಗೆ ನೀಡಿದ ಮಾರ್ಗದರ್ಶನವನ್ನು ಸ್ಮರಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಎಸ್.ಎಚ್. ಬಾದನಟ್ಟಿ ದಂಪತಿಯನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ಕಡೆಮನಿ, ಕೆ.ಎ. ಸರ್ಫರಾಜ್ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಖಜಾನೆ, ಉಪಖಜಾನೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು. ಶ್ರೀಮತಿ ಯಲ್ಲಮ್ಮ ಲಮಾಣಿ ಪ್ರಾರ್ಥಿಸಿದರು. ಎಸ್.ಬಿ. ಹದ್ಲಿ ಸ್ವಾಗತಿಸಿದರು. ಉಮೇಶ ಅಸುಂಡಿ ನಿರೂಪಿಸಿದರು. ಉಳವೇಶ ಸಿದ್ದನ್ನವರ ವಂದಿಸಿದರು.

# ಇಂದು ಫ.ಗು. ಹಳಕಟ್ಟಿ ಜಯಂತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜುಲೈ 4ರಂದು ಸಂಜೆ 6.30ಕ್ಕೆ ನಗರದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ಜಯಂತಿ ಅಂಗವಾಗಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ. ಹಿರಿಯ ಪತ್ರಕರ್ತ, ಕವಿ ಹಾಗೂ ವಿಮರ್ಶಕರಾದ ಜಿ.ಪಿ. ಬಸವರಾಜ (ಮೈಸೂರು) ಅವರು "ವಚನ ಚಳವಳಿಯ ವೈಚಾರಿಕ ಮತ್ತು ಮಾನವೀಯ ನೆಲೆಗಳು" ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಸಾಹಿತ್ಯಾಭಿಮಾನಿಗಳು, ಸಾಹಿತಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪೂರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ



**ಲಕ್ಕುಂಡಿ:** ಗ್ರಾಮದ ಅಲ್ಲಮ್ಮಪ್ರಭುದೇವರ ರಸ್ತೆಯ ನಿವಾಸಿ ಹಾಗೂ ಗ್ರಾಮ ಪಂಚಾಯಿತಿ ಮಾಜಿ ಸದಸ್ಯೆ ಕುಸುಮವ್ವ ಫಕ್ಕೀರಯ್ಯ ಚೌಕಿಮಠ (87) ಅವರು ಗುರುವಾರ ಸಂಜೆ ನಿಧನರಾದರು. ಮೃತರು ಐವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

# ಜನಸೇವೆಗೆ ನಿವೃತ್ತಿ ಇಲ್ಲ...! ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿದಾಗಲೇ ಸೇವೆಗೆ ಸಾರ್ಥಕತೆ: ಡಾ. ಬಸವರಾಜ ಬಳ್ಳಾರಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ನೌಕರರು ಜನರ ಸಮಸ್ಯೆಗಳಿಗೆ ಸ್ಪಂದಿಸಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದಾಗ ಮಾತ್ರ ಅವರ ಕರ್ತವ್ಯಕ್ಕೆ ನಿಜವಾದ ಸಾರ್ಥಕತೆ ದೊರೆಯುತ್ತದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ಖಜಾನೆ ಇಲಾಖೆ ಹಾಗೂ ಅರಣ್ಯ ಇಲಾಖೆ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಖಜಾನೆ ಸಹಾಯಕ ನಿರ್ದೇಶಕ ಎಸ್.ಎಚ್. ಬಾದನಟ್ಟಿ ಹಾಗೂ ಅರಣ್ಯ ಇಲಾಖೆಯ ಉಪವಲಯ ಅಧಿಕಾರಿ ಎನ್. ಜಯರಾಮ ಅವರ ಸೇವಾ ನಿವೃತ್ತಿ ಅಭಿನಂದನಾ ಹಾಗೂ ಬೀಳ್ಕೊಡುಗೆ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮತ್ತು ಸಾರ್ವಜನಿಕರಿಗೆ ಗುಣಮಟ್ಟದ ಸೇವೆ ನೀಡುವ ಜವಾಬ್ದಾರಿ ಸರ್ಕಾರಿ ನೌಕರರ ಮೇಲಿದೆ. ಸಹನೆ, ಸೌಜನ್ಯ ಹಾಗೂ ಸೇವಾ ಮನೋಭಾವದಿಂದ ಕರ್ತವ್ಯ ನಿರ್ವಹಿಸಿದಾಗ ಮಾತ್ರ ಸಮಾಜದಲ್ಲಿ ಗೌರವ ಮತ್ತು ಆತ್ಮತೃಪ್ತಿ ದೊರೆಯುತ್ತದೆ ಎಂದು ಹೇಳಿದರು.

ಅರಣ್ಯ ಇಲಾಖೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿದ ಎನ್. ಜಯರಾಮ ಅವರ ಪರಿಸರ ಸೇವೆಯನ್ನು ಶ್ಲಾಘಿಸಿದ ಅವರು, ತಮ್ಮ ಅಧಿಕಾರಾವಧಿಯಲ್ಲಿ ಲಕ್ಷಾಂತರ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಮನೆಯೇ ಸಸ್ಯ ಸಂಗ್ರಹಾಲಯದಂತಿದ್ದು, ಜಿಲ್ಲೆಯ 'ಸಾಲುಮರದ ತಿಮ್ಮಕ್ಕ' ಎಂದು ಅವರನ್ನು ಕರೆಯಬಹುದು ಎಂದು ಪ್ರಶಂಸಿಸಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ ಸರ್ಕಾರಿ ನೌಕರರ ಪ್ರತಿಭಾವಂತ ಮಕ್ಕಳಿಗೆ ಜುಲೈ 5ರಂದು ಹಾವೇರಿಯಲ್ಲಿ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಾಜಿ ರಾಜ್ಯ ಉಪಾಧ್ಯಕ್ಷ ರವಿ ಎಲ್. ಗುಂಜಿಕರ್ ಮಾತನಾಡಿ, ಸರ್ಕಾರಿ ನೌಕರರ ಸಂಘವು ಕೇವಲ ವೇತನ ಮತ್ತು ಭತ್ಯೆಗಳಿಗಾಗಿ ಹೋರಾಡುವ ಸಂಘಟನೆಯಲ್ಲ; ನೌಕರರು ಹಾಗೂ ಅವರ ಕುಟುಂಬದ ಹಿತರಕ್ಷಣೆಗೆ ಸದಾ ಬದ್ಧವಾಗಿರುವ ಜವಾಬ್ದಾರಿಯುತ ವೇದಿಕೆಯಾಗಿದೆ ಎಂದು ಹೇಳಿದರು.

ಮಾಹಿತಿ ಹಕ್ಕು ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ಕೆಲವರು ಪ್ರಾಮಾಣಿಕ ನೌಕರರಿಗೆ ಕಿರುಕುಳ ನೀಡುತ್ತಿರುವುದು ಆತಂಕಕಾರಿ. ಇಂತಹ ಸಂದರ್ಭಗಳಲ್ಲಿ ಸಂಘಟನೆ ಸದಾ ನೌಕರರ ಪರವಾಗಿ ನಿಲ್ಲಲಿದೆ ಎಂದು ಭರವಸೆ ನೀಡಿದರು.

ಜಿಲ್ಲಾ ಖಜಾನೆ ಉಪನಿರ್ದೇಶಕ ಹರಿನಾಥ ಬಾಬು ಮಾತನಾಡಿ, ಉದ್ಯೋಗ ಸಿಗುವುದು ಅದೃಷ್ಟವಾದರೆ, ಗೌರವಯುತ ನಿವೃತ್ತಿ ಪಡೆಯುವುದು ಅದಕ್ಕಿಂತ ದೊಡ್ಡ ಸಾಧನೆ. ಸರ್ಕಾರಿ ಕಚೇರಿಗೆ ಬರುವ ಪ್ರತಿಯೊಬ್ಬ ನಾಗರಿಕನು ತನ್ನ ಕೆಲಸ ಶೀಘ್ರ ಆಗಬೇಕು ಮತ್ತು ಗೌರವ ಸಿಗಬೇಕು ಎಂಬ ನಿರೀಕ್ಷೆಯೊಂದಿಗೆ ಬರುತ್ತಾನೆ. ಆ ನಿರೀಕ್ಷೆ ಈಡೇರಿಸಿದಾಗ ಮಾತ್ರ ಸರ್ಕಾರಿ ಸೇವೆಗೆ ನಿಜವಾದ ಅರ್ಥ ಬರುತ್ತದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸೇವಾ ನಿವೃತ್ತರಾದ ಎಸ್.ಎಚ್. ಬಾದನಟ್ಟಿ ಮತ್ತು ಎನ್. ಜಯರಾಮ ದಂಪತಿಗಳನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ಖಜಾನೆ ಇಲಾಖೆಯ ದೇವಪ್ಪ ನಾಯಕ್ ಹಾಗೂ ತೋಟಗಾರಿಕೆ ಇಲಾಖೆಯ ವೀರಪ್ಪ ಕುಂಬಾರ ಅವರನ್ನೂ ಅಭಿನಂದಿಸಲಾಯಿತು.

> "ಸರ್ಕಾರಿ ಸೇವೆ ಎಂದರೆ ಕೇವಲ ಹುದ್ದೆಯಲ್ಲ, ಜನರ ವಿಶ್ವಾಸವನ್ನು ಉಳಿಸುವ ಜವಾಬ್ದಾರಿ. ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿ ಸೇವೆ ಸಲ್ಲಿಸಿದಾಗಲೇ ನೌಕರನ ಜೀವನ ಸಾರ್ಥಕವಾಗುತ್ತದೆ."
> **–ಡಾ. ಬಸವರಾಜ ಬಳ್ಳಾರಿ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾಧ್ಯಕ್ಷ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ**

ಕ್ರೀಡಾ ಕಾರ್ಯದರ್ಶಿ ಐ.ಎ. ಗಾಡಗೋಳಿ ಸ್ವಾಗತಿಸಿದರು. ಜಿಲ್ಲಾ ಕಾರ್ಯದರ್ಶಿ ಮುತ್ತು ವೈ. ಮಲಕಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಅಮೀರ ನಾಯಕ ವಂದಿಸಿದರು.

ಕಾರ್ಯಕ್ರಮದಲ್ಲಿ ನರಗುಂದ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ, ಜಿಲ್ಲಾ ಉಪಾಧ್ಯಕ್ಷ ಎಸ್.ಎಸ್. ಪಾರ್ವತಿಮಠ, ಜಿಲ್ಲಾ ನಿರ್ದೇಶಕ ರಾಜಕುಮಾರ ಸೊಪ್ಪಡ್ಲ, ಜಿಲ್ಲಾ ಸಾಂಸ್ಕೃತಿಕ ಕಾರ್ಯದರ್ಶಿ ಎಫ್.ಜೆ. ದಲಬಂಜನ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ನೌಕರರು, ಕುಟುಂಬ ಸದಸ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಸ್ವೀಪ್ ಸಮಿತಿಯಿಂದ ಜಾಗೃತಿ ರ್‍ಯಾಲಿ, ಮಾನವ ಸರಪಳಿ; ಎಸ್‌ಐಆರ್–2026 ಯಶಸ್ಸಿಗೆ ಸಾರ್ವಜನಿಕರ ಸಹಕಾರಕ್ಕೆ ಕರೆ

# ನಿಖರ ಮತದಾರರ ಪಟ್ಟಿಗೆ ಜನರೇ ಪಾಲುದಾರರು



ವಿಜಯಸಾಕ್ಷಿ ಸುದ್ದಿ, ರೋಣ

ಪ್ರಜಾಪ್ರಭುತ್ವದ ಸದೃಢತೆಗೆ ನಿಖರ ಮತದಾರರ ಪಟ್ಟಿ ಅತ್ಯಗತ್ಯವಾಗಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಹೇಳಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್–2026) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ತಾಲೂಕು ಸ್ವೀಪ್ ಸಮಿತಿ, ತಾಲೂಕು ಪಂಚಾಯಿತಿ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಶುಕ್ರವಾರ ರೋಣದಲ್ಲಿ ಜಾಗೃತಿ ರ್‍ಯಾಲಿ ಹಾಗೂ ಮಾನವ ಸರಪಳಿ ಕಾರ್ಯಕ್ರಮ ನಡೆಯಿತು.

ನಗರದ ಸಿದ್ಧಾರೂಢ ದೇವಸ್ಥಾನದ ಆವರಣದಿಂದ ಆರಂಭವಾದ ಜಾಗೃತಿ ರ್‍ಯಾಲಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ನಾಲ್ಕು ಶಾಲೆಗಳ ವಿದ್ಯಾರ್ಥಿಗಳು ಹಾಗೂ ಸ್ವೀಪ್ ಸಮಿತಿ ಸದಸ್ಯರು ಭಾಗವಹಿಸಿ ಮತದಾರರ ಜಾಗೃತಿ ಘೋಷಣೆಗಳನ್ನು ಕೂಗಿದರು. ಬಳಿಕ ಪೋತರಾಜನಕಟ್ಟಿ ಬಳಿ ಮಾನವ ಸರಪಳಿ ನಿರ್ಮಿಸಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಿದರು.

ಈ ವೇಳೆ ಮಾತನಾಡಿದ ಚಂದ್ರಶೇಖರ ಬಿ. ಕಂದಕೂರ, ಜೂನ್ 30ರಿಂದ ಜುಲೈ 29ರವರೆಗೆ ನಡೆಯುವ ವಿಶೇಷ ಪರಿಷ್ಕರಣೆ ಅವಧಿಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ–ಮನೆಗೆ ತೆರಳಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

> "ಪ್ರತಿ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ನಿಖರ ಮತದಾರರ ಪಟ್ಟಿಯ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರವೇ ಚುನಾವಣಾ ಪ್ರಕ್ರಿಯೆಯ ಯಶಸ್ಸಿನ ಮೂಲಾಧಾರ."
> **–ಚಂದ್ರಶೇಖರ ಬಿ. ಕಂದಕೂರ, ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ತಾಪಂ ಕಾರ್ಯನಿರ್ವಾಹಕ ಅಧಿಕಾರಿ**

ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ಒದಗಿಸಿ ಸಹಕರಿಸಬೇಕು. ಹೆಸರು ಸೇರ್ಪಡೆ, ತಿದ್ದುಪಡಿ, ವಿಳಾಸ ಬದಲಾವಣೆ ಹಾಗೂ ಹೆಸರು ಅಳಿಸುವಿಕೆ ಸೇರಿದಂತೆ ಅಗತ್ಯ ನಮೂನೆಗಳನ್ನು ಭರ್ತಿ ಮಾಡಿ ಸ್ವೀಕೃತಿ ಪಡೆಯುವುದು ಅತ್ಯಂತ ಮುಖ್ಯ ಎಂದು ತಿಳಿಸಿದರು. ಹೊಸದಾಗಿ 18 ವರ್ಷ ಪೂರೈಸಿದ ಯುವಕರು ಹಾಗೂ ಇನ್ನೂ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸದ ಅರ್ಹರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು. ಗ್ರಾಮ ಪಂಚಾಯಿತಿಗಳು, ಶಾಲಾ–ಕಾಲೇಜುಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಸಹಾಯಕ ಲೆಕ್ಕಾಧಿಕಾರಿ ದೇವರಾಜ ಸಜ್ಜನಶೆಟ್ಟರ, ತಾಲೂಕು ಯೋಜನಾಧಿಕಾರಿ ಸಿ.ಎಸ್. ನೀಲಗುಂದ, ಕ್ಷೇತ್ರ ಶಿಕ್ಷಣಾಧಿಕಾರಿ ದಯಾನಂದ ಯಾವಗಲ, ಕ್ಷೇತ್ರ ಸಮನ್ವಯಾಧಿಕಾರಿ ಎಂ.ಎ. ಫಣಿಬಂಧ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸ್ವೀಪ್ ಸಮಿತಿ ಸದಸ್ಯರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಜಕ್ಕಲಿಯಲ್ಲಿ ಸಹಕಾರ ಸಪ್ತಾಹ; ಕೆಸಿಸಿ ಬ್ಯಾಂಕ್, ಹಾಲು ಒಕ್ಕೂಟದ ಸೌಲಭ್ಯಗಳ ಮಾಹಿತಿ

# ಸಹಕಾರವೇ ರೈತರ ಸಮೃದ್ಧಿಯ ಹೆಬ್ಬಾಗಿಲು



**ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರ ಸಂಘಗಳು ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿದ್ದು, ರೈತರ ಆದಾಯ, ಸ್ವಾವಲಂಬನೆ ಹಾಗೂ ಉದ್ಯೋಗ ವೃದ್ಧಿಗೆ ಸಹಕಾರ ಚಳವಳಿ ಮತ್ತಷ್ಟು ಬಲಗೊಳ್ಳಬೇಕಿದೆ ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಶೋಕಪ್ಪ ಯಾವಗಲ್ ಹೇಳಿದರು.

> "ಸಹಕಾರದಿಂದ ಸಮೃದ್ಧಿ ಎಂಬ ಧ್ಯೇಯ ಸಾಕಾರಗೊಳ್ಳಬೇಕಾದರೆ ರೈತರು ಮತ್ತು ಸಹಕಾರ ಸಂಘಗಳು ಪರಸ್ಪರ ಕೈಜೋಡಿಸಿ ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸಬೇಕು."
> **–ಅಶೋಕಪ್ಪ ಯಾವಗಲ್**

ಜಕ್ಕಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಕೆಸಿಸಿ ಬ್ಯಾಂಕ್, ಧಾರವಾಡ ಹಾಲು ಒಕ್ಕೂಟ ಹಾಗೂ ಸ್ಥಳೀಯ ಸಹಕಾರ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಕೇಂದ್ರ ಸಹಕಾರ ಸಚಿವಾಲಯದ ಐದು ವರ್ಷಗಳ ಸಂಭ್ರಮದ ಅಂಗವಾಗಿ ನಡೆದ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆಸಿಸಿ ಬ್ಯಾಂಕ್‌ನ ಮಾಜಿ ನಿರ್ದೇಶಕ ಸಿ.ಕೆ. ಮಾಳಶೆಟ್ಟಿ ಬ್ಯಾಂಕ್‌ನ ಕೃಷಿ ಸಾಲ, ಉಳಿತಾಯ ಖಾತೆ, ಠೇವಣಿ ಹಾಗೂ ವಿವಿಧ ಸಾಲ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ರೋಣ ತಾಲೂಕು ವೈದ್ಯಾಧಿಕಾರಿ ಡಾ. ಪಿ.ಎಂ. ಕಮತಿ ಮತ್ತು ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ಕೆ.ವಿ. ಹಾದಿಮನಿ ಆರೋಗ್ಯಕರ ಜೀವನಶೈಲಿ, ಹೃದಯಾಘಾತ ತಡೆ ಹಾಗೂ ಪೌಷ್ಟಿಕ ಆಹಾರದ ಮಹತ್ವದ ಕುರಿತು ಅರಿವು ಮೂಡಿಸಿದರು.

ಕೆಸಿಸಿ ಬ್ಯಾಂಕ್ ವ್ಯವಸ್ಥಾಪಕ ವಿ.ಎಸ್. ಪಾಟೀಲ ಬ್ಯಾಂಕಿಂಗ್ ಸೇವೆಗಳು ಹಾಗೂ ಡಿಜಿಟಲ್ ಸೌಲಭ್ಯಗಳನ್ನು ವಿವರಿಸಿದರೆ, ಧಾರವಾಡ ಹಾಲು ಒಕ್ಕೂಟದ ವಿಸ್ತರಣಾಧಿಕಾರಿ ಜಿ.ಸಿ. ಸಾಲೋಟಿಮಠ ಹಾಲು ಉತ್ಪಾದಕರಿಗೆ ದೊರೆಯುವ ಪ್ರೋತ್ಸಾಹಧನ, ವಿಮೆ ಹಾಗೂ ಅನುದಾನಿತ ಯೋಜನೆಗಳ ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಶಿವನಾಗಪ್ಪ ಜಂಬೂನಾಥ ದೊಡ್ಡಮೇಟಿ, ರೈತರಿಗೆ ಹೆಚ್ಚಿನ ಸಾಲ ಸೌಲಭ್ಯ ಕಲ್ಪಿಸಿ ಸಹಕಾರ ಸಂಘಗಳನ್ನು ಮತ್ತಷ್ಟು ಬಲಪಡಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಸಹಕಾರ ಅಭಿವೃದ್ಧಿ ಅಧಿಕಾರಿ ಪ್ರಶಾಂತ ಮುಧೋಳ ಸೇರಿದಂತೆ ವಿವಿಧ ಸಹಕಾರ ಸಂಘಗಳ ಪದಾಧಿಕಾರಿಗಳು, ಆರೋಗ್ಯ ಇಲಾಖೆ ಅಧಿಕಾರಿಗಳು, ರೈತರು ಹಾಗೂ ಸಾರ್ವಜನಿಕರು ಪಾಲ್ಗೊಂಡರು.

# ಎಣ್ಣೆಕಾಳು ಸಂಸ್ಕರಣಾ ಘಟಕಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಎಣ್ಣೆಕಾಳು ಬೆಳೆಗಳಿಗೆ ಮೌಲ್ಯವರ್ಧನೆ ಮಾಡಿ ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಗದಗ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ 10 ಟನ್ ಸಾಮರ್ಥ್ಯದ ಎಣ್ಣೆಕಾಳು ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತರು, ರೈತ ಉತ್ಪಾದಕ ಸಂಸ್ಥೆಗಳು (ಎಫ್‌ಪಿಒ), ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ನೋಂದಾಯಿತ ಸಂಸ್ಥೆಗಳು ಜುಲೈ 31ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಯೋಜನೆಯಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ 60:40 ಅನುಪಾತದಲ್ಲಿ, ಯೋಜನಾ ವೆಚ್ಚದ ಶೇ.33ರಷ್ಟು (ಗರಿಷ್ಠ ರೂ.9.90 ಲಕ್ಷ) ಸಹಾಯಧನ ನೀಡಲಾಗುತ್ತದೆ. ಫಲಾನುಭವಿಗಳು ಯೋಜನೆ ಅನುಷ್ಠಾನಕ್ಕೆ ಅಗತ್ಯವಾದ ಸ್ವಂತ ಬಂಡವಾಳ ಹೂಡುವ ಸಾಮರ್ಥ್ಯ ಹೊಂದಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಗದಗ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಥಗಿತ ಸಹಕಾರ ಸಂಘಕ್ಕೆ ಸಮಾಪನೆ ಪ್ರಕ್ರಿಯೆ; ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೇ ಸ್ಥಗಿತಗೊಂಡಿರುವ ಗಜೇಂದ್ರಗಡ ತಾಲೂಕಿನ ಎಸ್.ಎಂ. ಭೂಮರೆಡ್ಡಿ ಜೂನಿಯರ್ ಕಾಲೇಜ್ ಎಂಪ್ಲಾಯೀಸ್ ಕ್ರೆಡಿಟ್ ಸೊಸೈಟಿ ನಿ., ಗಜೇಂದ್ರಗಡ ಅನ್ನು ಸಮಾಪನೆಗೊಳಿಸುವ ಪ್ರಕ್ರಿಯೆ ಆರಂಭಿಸಲಾಗಿದ್ದು, ಸಂಬಂಧಪಟ್ಟವರು ಏಳು ದಿನಗಳೊಳಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸಹಕಾರ ಸಂಘವು ತನ್ನ ನೋಂದಾಯಿತ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಸಂಘದ ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ ಕುರಿತು ಮಾಹಿತಿ ಲಭ್ಯವಿಲ್ಲದ ಹಿನ್ನೆಲೆಯಲ್ಲಿ ಮಾನ್ಯ ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿ ಸಮಾಪನಾಧಿಕಾರಿಯನ್ನು ನೇಮಿಸಿದ್ದಾರೆ.

ಸಂಘಕ್ಕೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿಗಳಿಗೆ ಅಥವಾ ವ್ಯಕ್ತಿಗಳಿಂದ ಕೊಡತಕ್ಕ ಅಥವಾ ಬರತಕ್ಕ ಬಾಕಿ ವ್ಯವಹಾರಗಳಿದ್ದರೆ, ಅಗತ್ಯ ದಾಖಲಾತಿಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನದಿಂದ ಏಳು ದಿನಗಳೊಳಗೆ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯಲ್ಲಿರುವ ಸಹಕಾರ ಸಂಘಗಳ ನಿರೀಕ್ಷಕರನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬೇಕು.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಸಂಘದ ಅಥಾವೆಯನ್ನು ನಿಯಮಾನುಸಾರ ಶೂನ್ಯಗೊಳಿಸಿ ನೋಂದಣಿ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು. ನಂತರ ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ಆನಂದ ಗವಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 7 ರಂದು ವಾಕ್ ಇನ್–ಇಂಟರ್‌ವ್ಯೂವ್

**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್–ಇಂಟರ್‌ವ್ಯೂವನ್ನು ಜುಲೈ 7 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕೊಪ್ಪಳ ಜಿಲ್ಲಾ ಆಡಳಿತ ಭವನದ ಮೊದಲನೇ ಮಹಡಿಯಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಅಭ್ಯರ್ಥಿಗಳು ಪಿ.ಯು.ಸಿ, ಯಾವುದೇ ಪದವಿ ವಿದ್ಯಾಭ್ಯಾಸ ಮುಗಿಸಿದವರು ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಭಾಗವಹಿಸಬಹುದು. 18 ರಿಂದ 35 ವರ್ಷದ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು 3 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜ್ಯುಮ್) ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಚನ ಸಂಸ್ಕೃತಿಯ ದೀವಟಿಗೆ ಫ.ಗು. ಹಳಕಟ್ಟಿ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶರಣರ ವಚನ ಸಾಹಿತ್ಯವನ್ನು ಕಾಲಗರ್ಭದಿಂದ ಹುಡುಕಿ ಸಂಗ್ರಹಿಸಿ ಮುಂದಿನ ಪೀಳಿಗೆಗೆ ಉಳಿಸಿಕೊಟ್ಟ ಡಾ. ಫ.ಗು. ಹಳಕಟ್ಟಿಯವರು ವಚನ ಸಾಹಿತ್ಯದ ನಿಜವಾದ ಪಿತಾಮಹರಾಗಿದ್ದು, ಅವರ ಸೇವೆ ಕನ್ನಡ ಸಾಹಿತ್ಯ ಲೋಕಕ್ಕೆ ಅಮೂಲ್ಯ ಕೊಡುಗೆಯಾಗಿದೆ ಎಂದು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಂಜುನಾಥ ಮಟ್ಟಿ ಹೇಳಿದರು.

ಪಟ್ಟಣದ ಗುರುಶಾಂತ ಮಟ್ಟಿ ಅವರ ಮನೆಯಲ್ಲಿ ಮುಳಗುಂದ ಶರಣ ಸಾಹಿತ್ಯ ಪರಿಷತ್ತು ಹಾಗೂ ಮಹಿಳಾ ಕದಳಿ ವೇದಿಕೆ ವತಿಯಿಂದ ಆಯೋಜಿಸಿದ್ದ 'ಮನೆಮನದಲ್ಲಿ ಶರಣ ಸಂಸ್ಕೃತಿ' ಕಾರ್ಯಕ್ರಮದಲ್ಲಿ ಡಾ. ಫ.ಗು. ಹಳಕಟ್ಟಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಶರಣರ ಜೀವನ ಮೌಲ್ಯಗಳನ್ನು ಪ್ರತಿಬಿಂಬಿಸುವ ವಚನ ಸಾಹಿತ್ಯವನ್ನು ಸಂಶೋಧಿಸಿ, ಸಂಗ್ರಹಿಸಿ ಉಳಿಸುವ ಮೂಲಕ ಡಾ. ಫ.ಗು. ಹಳಕಟ್ಟಿಯವರು ಕನ್ನಡಕ್ಕೆ ಅಪೂರ್ವ ಸೇವೆ ಸಲ್ಲಿಸಿದ್ದಾರೆ. ಅವರು ಈ ಕಾರ್ಯ ಮಾಡಿರದಿದ್ದರೆ ಇಂದು ಶಿವಶರಣರ ಅಮೂಲ್ಯ ವಚನಗಳು ನಮ್ಮ ಕೈ ಸೇರದೇ ಇರಬಹುದಾಗಿತ್ತು. ಮನೆಮನೆಗಳಲ್ಲಿ ಶರಣರ ವಚನಗಳನ್ನು ಪಠಿಸುವುದರಿಂದ ಮನಶಾಂತಿ, ಉತ್ತಮ ಜೀವನ ಮೌಲ್ಯಗಳು ಹಾಗೂ ಮುಕ್ತಿಯ ಮಾರ್ಗ ದೊರೆಯುತ್ತದೆ ಎಂದು ಹೇಳಿದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ವಚನಗಳು ನಿತ್ಯ ಜೀವನಕ್ಕೆ ದಾರಿದೀಪಗಳಾಗಿವೆ. ಅವುಗಳನ್ನು ಸಂರಕ್ಷಿಸಿ ಮುದ್ರಿಸಲು ತಮ್ಮ ಸಂಪೂರ್ಣ ಆಸ್ತಿ–ಪಾಸ್ತಿಯನ್ನೇ ಮುಡುಪಾಗಿಟ್ಟ ಡಾ. ಫ.ಗು. ಹಳಕಟ್ಟಿಯವರ ಜೀವನ ಎಲ್ಲರಿಗೂ ಆದರ್ಶವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೈದ್ಯರ ದಿನಾಚರಣೆಯ ಅಂಗವಾಗಿ ಡಾ. ಎಸ್.ಸಿ. ಚವಡಿ ಹಾಗೂ ಡಾ. ಶೇಖರ ಮಟ್ಟಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಇದೇ ವೇಳೆ ಶರಣರ ವಚನಗಳ ಪಠಣವೂ ನಡೆಯಿತು.

ನೀಲಮ್ಮ ಮಟ್ಟಿ, ಸಂಜನಾ ಮಟ್ಟಿ, ಸುಮನ ಚವಡಿ, ಶಾಂತವ್ವ ಮಟ್ಟಿ, ವಿನೋದಾ ಮಟ್ಟಿ, ರತ್ನವ್ವ ತಡೆದಮಠ, ಸವಿತಾ ಮಟ್ಟಿ, ಉಮಾ ಮಟ್ಟಿ, ಎಸ್.ಎಸ್. ಹಿರೇಮಠ, ಈರಣ್ಣ ದೊಟಿಕಲ್, ಸಂಜಯ ನೀಲಗುಂದ, ಮಹಾಂತೇಶ ನಪೂರಿಮಠ, ಅಶೋಕ ಗಡಾದ, ಮುತ್ತಪ್ಪ ಹುಡೆದ, ಶಿವಾನಂದ ಆಪ್ತಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸ್ನಾತಕೋತ್ತರ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಕ್ಕಾಗಿ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ಎಂ.ಎ. (ಗ್ರಾಮೀಣಾಭಿವೃದ್ಧಿ, ಸಾರ್ವಜನಿಕ ಆಡಳಿತ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ), ಎಂ.ಎಸ್.ಡಬ್ಲ್ಯು., ಎಂ.ಕಾಂ., ಎಂ.ಎಸ್ಸಿ. (ಜಿಯೊಇನ್ಫರ್ಮ್ಯಾಟಿಕ್ಸ್, ಆಹಾರ ವಿಜ್ಞಾನ ಮತ್ತು ತಂತ್ರಜ್ಞಾನ), ಎಂ.ಸಿ.ಎ. (ಎಐ), ಎಂ.ಪಿ.ಎಚ್. ಹಾಗೂ ಎಂ.ಬಿ.ಎ. (ಗ್ರಾಮೀಣ ನಿರ್ವಹಣೆ) ಸೇರಿದಂತೆ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳಿಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ 7975202206 / 7795100729 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಅಥವಾ ವಿಶ್ವವಿದ್ಯಾಲಯದ ಜಾಲತಾಣವನ್ನು ವೀಕ್ಷಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ರಾಷ್ಟ್ರೀಯ ವೈದ್ಯರ ದಿನಾಚರಣೆ ನಾಳೆ

**ವಿಜಯಸಾಕ್ಷಿ ಸುದ್ದಿ, ಗದಗ**

ಬ್ರಹ್ಮಕುಮಾರಿಸ್ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ದಿ.5 ಭಾನುವಾರ ಸಂಜೆ 5.30ಕ್ಕೆ ಬ್ರಹ್ಮಕುಮಾರಿಸ್, ಆಧ್ಯಾತ್ಮಿಕ ಸಂಸ್ಕೃತಿ ಭವನ, ಡಂಬಳ ನಾಕಾ, ಸಿದ್ದರಾಮೇಶ್ವರ ನಗರದಲ್ಲಿ ಹಮ್ಮಿಕೊಳ್ಳಲಾಗಿದೆ. ಎಲ್ಲ ವೈದ್ಯರಿಗೂ ಸ್ವಾಗತ ಕೋರಲಾಗಿದೆ. ಸಂಪರ್ಕ ಸಂಖ್ಯೆ: 6360753992.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka